MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER


ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 196 | ಮಂಗಳವಾರ : 20-05-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 196 | TUESDAY: 20-05-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


ಯುವ ಸ್ಫೂರ್ತಿ



ನಮ್ಮ ನೈತಿಕ ಪ್ರಕೃತಿ ಎಷ್ಟು ಉನ್ನತಮಟ್ಟದ್ದಾಗಿರುತ್ತದೋ ನಮ್ಮ ಉನ್ನತಿಯೂ ಅಷ್ಟೇ ಎತ್ತರದ್ದಾಗಿರುತ್ತದೆ.
–ಸ್ವಾಮಿ ವಿವೇಕಾನಂದ

### ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್ ಸೂಚನೆ

# ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಕ್ಕೆ ಕ್ರಮವಹಿಸಿ

ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.20–**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ನಂತರ ಹಾಗೂ ಪದವಿ ಪೂರ್ವ ಮತ್ತು ನಂತರದ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಅಗತ್ಯಕ್ಕೆ ತಕ್ಕಂತೆ ಬೆಡ್ ಮತ್ತು ಕಾಟ್ ಸೇರಿದಂತೆ ಎಲ್ಲ ರೀತಿಯ ಮೂಲಭೂತ ಸೌಕರ್ಯ ಕಲ್ಪಿಸಲು ಕೂಡಲೇ ಅಗತ್ಯ ಕ್ರಮ ವಹಿಸಬೇಕು ಎಂದು ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆಗಿರುವ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶ್ ಕುಮಾರ್ ಸಿಂಗ್ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ 2025–26ನೇ ಸಾಲಿನ ಜಿಲ್ಲಾ ಪಂಚಾಯತ್ ಜಿಲ್ಲಾ ವಲಯ ಕಾರ್ಯಕ್ರಮಗಳ ವಾರ್ಷಿಕ ಕ್ರಿಯಾ ಯೋಜನೆಗಳ ಪರಿಶೀಲನೆ ಮತ್ತು ಅನುಮೋದನೆ ನೀಡುವ ಕುರಿತು ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಮೇ 19ರಂದು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವೃತ್ತಿಪರ ಕೋರ್ಸಗಳ ವಸತಿ ನಿಲಯಗಳು ಸೇರಿದಂತೆ ರಾಯಚೂರ ಜಿಲ್ಲೆಯಲ್ಲಿ ಇಲಾಖಾವಾರು ಇರುವ ವಸತಿ ನಿಲಯಗಳು, ಅಲ್ಲಿನ ವಿದ್ಯಾರ್ಥಿಗಳ ಸಂಖ್ಯೆ, ಮೂಲಭೂತ ಸೌಕರ್ಯದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದ ಕಾರ್ಯದರ್ಶಿಗಳು, ಕ್ಷೇತ್ರ ಭೇಟಿ ವೇಳೆ ಬಿಸಿಎಂ ಇಲಾಖೆಯ ಅಧೀನದ ಕೆಲವು ವಸತಿ ನಿಲಯಗಳಲ್ಲಿ ಕಾಟ್ ಮತ್ತು ಬೆಡ್ ಇಲ್ಲದಿರುವುದರ ಬಗ್ಗೆ ಖುದ್ದು ವೀಕ್ಷಣೆ ಮಾಡಿ ಗಮನಿಸಿದ್ದೇನೆ. ಇದಕ್ಕಾಗಿ ಅನುದಾನ ಮೀಸಲಿರಿಸಿ ಟೆಂಡರ್ ಪ್ರಕ್ರಿಯೆ ನಡೆಸಿ ಕೂಡಲೇ ವ್ಯವಸ್ಥೆ ಮಾಡಬೇಕು. ಕಾಟಗಳು ಇಲ್ಲದೇ ಚಾಪೆ ಮೇಲೆ ಮಕ್ಕಳು ಮಲಗದಂತೆ, ಎಲ್ಲ ಮೂಲಸೌಕರ್ಯಗಳು ಲಭ್ಯವಾಗುವ ಹಾಗೆ ವಸತಿ



ನಿಲಯಗಳ ಮೇಲೆ ಸೂಕ್ತ ಮೇಲ್ವಿಚಾರಣೆ ನಡೆಸಬೇಕು ಎಂದು ಬಿಸಿಎಂ, ಸಮಾಜ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳಿಗೆ ಕಾರ್ಯದರ್ಶಿಗಳು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

2ನೇ ಪುಟಕ್ಕೆ

## ಸೂರ್ಯಕಾಂತಿ ಖರೀದಿ ಕೇಂದ್ರಗಳ ಸ್ಥಾಪನೆ: ಜಿಲ್ಲಾಧಿಕಾರಿ ನಿತೀಶ್.ಕೆ

ಯುವ ಮಾರ್ಗ ಸುದ್ದಿ



**ರಾಯಚೂರು,ಮೇ.20–**ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ 2024–25ನೇ ಸಾಲಿನಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಹಿಂಗಾರು ಹಂಗಾಮಿನ ಸೂರ್ಯಕಾಂತಿ ಉತ್ಪನ್ನವನ್ನು ಖರೀದಿಸಲು ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಟಾಸ್ಕ್ ಪೋರ್ಸ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ರೈತರಿಂದ ಹಿಂಗಾರು ಹಂಗಾಮಿನ ಸೂರ್ಯಕಾಂತಿ ಉತ್ಪನ್ನವನ್ನು ಪ್ರತಿ ಎಕರಿಗೆ 4 ಕ್ವಿಂಟಾಲ್ ನಿಂದ ಗರಿಷ್ಠ 20 ಕ್ವಿಂಟಾಲ್ ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಾಲ್‌ಗೆ 7,280 ರೂ.ಗಳಂತೆ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸಲಾಗುತ್ತಿದ್ದು, ಮೇ 16ರಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗಧಿಪಡಿಸಿದೆ. ರೈತರಿಂದ ಸೂರ್ಯಕಾಂತಿಯನ್ನು ಖರೀದಿಸುವ ಸಂಬಂಧ ರಾಯಚೂರು ತಾಲೂಕಿನ ಹುಣಸಿಹಾಳಹುಡಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಕಾರ್ಯದರ್ಶಿ ಷಣ್ಮುಖ.ಜಿ

2ನೇ ಪುಟಕ್ಕೆ

## ಹೊಸಪೇಟೆಯಲ್ಲಿ ಕಾಂಗ್ರೆಸ್‌ನಿಂದ ಸಾಧನಾ ಸಮಾವೇಶ

**ಬೆಂಗಳೂರು, ಮೇ.20–** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ನಾಳೆ 2 ವರ್ಷ ಪೂರೈಸಿ, 3ನೇ ವರ್ಷಕ್ಕೆ ಕಾಲಿರಿಸಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ 2 ವರ್ಷದ ಸಂಭ್ರಮದ ಸಾಧನಾ ಸಮಾವೇಶ ನಾಳೆ ಹೊಸಪೇಟೆಯಲ್ಲಿ ನಡೆಯಲಿದೆ.

ಕಾಂಗ್ರೆಸ್‌ನ ಈ ಸಾಧನಾ ಸಮಾವೇಶವನ್ನು ಯಶಸ್ವಿಗೊಳಿಸಲು ಸಿದ್ಧತೆಗಳು ಭರದಿಂದ ನಡೆದಿದ್ದು, ಈ ಸಮಾವೇಶಕ್ಕೆ ಸಮರ್ಪಣೆ, ಸಂಕಲ್ಪ ಸಮಾವೇಶ ಎಂದು ಹೆಸರಿಲಾಗಿದೆ. ಸರ್ಕಾರದ 2 ವರ್ಷಗಳ



ಸಾಧನೆಯ ಸಮರ್ಪಣೆ, ಸಂಕಲ್ಪ ಸಮಾವೇಶದಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಸಚಿವ ಸಂಪುಟದ ಎಲ್ಲ ಸಚಿವರು, ಕಾಂಗ್ರೆಸ್‌ನ ಶಾಸಕರುಗಳು, ಸಂಸದರುಗಳು ಪಾಲ್ಗೊಳ್ಳುವರು.

2ನೇ ಪುಟಕ್ಕೆ

## ಜಮೀನು ವಿಚಾರ : ಯೋಧನಿಗೆ ಮಚ್ಚಿನಿಂದ ಹೊಡೆದು ಹಲ್ಲೆ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.20–** ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಎದರುಗಡೆ ಇರುವ ಖಾಸಗಿ ಲೇಔಟ್ ನಲ್ಲಿ ಯೋಧನಾದ ಚನ್ನಬಸವ ಅಲಿಯಾಸ್ ಮಿಲ್ಟ್ರಿ ಚನ್ನಪ್ಪ (35)ಇವರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿರುವ ಘಟನೆ ಸೋಮವಾರ ಬೆಳಗಿನ ಜಾವ ನಡೆದಿದೆ.

ಪುರಸಭೆ ವ್ಯಾಪ್ತಿಯ ಕಸಬಾ ಲಿಂಗಸುಗೂರು ನಿವಾಸಿಯಾದ ಯೋಧ ಚನ್ನಬಸವ ರಜೆಯ ಮೇಲೆ ಊರಿಗೆ ಬಂದಿದ್ದ, ಪ್ರತಿದಿನದಂತೆ ವಾಕಿಂಗ್ ಮುಗಿಸಿ ಲೇಔಟ್‌ನಲ್ಲಿ ನಿರ್ಮಾಣ ಮಾಡಲಾಗಿರುವ ಸಿ.ಸಿ ರಸ್ತೆಯ ಪಕ್ಕದಲ್ಲಿ ಕುಳಿತಿರುವಾಗ, ಆ ಸ್ಥಳಕ್ಕೆ ಟಿ.ವಿ.ಎಸ್ ಎಕ್ಸಲ್ ಮೇಲೆ ಬಂದ ಆರೋಪಿ ಅಮರೇಶ ತಂ/ ಶರಣಪ್ಪ (47) ಎಂಬಾತ ಏಕಏಕಿ ಮಚ್ಚಿನಿಂದ ಹಲ್ಲೆ ಮಾಡಲು ಮುಂದಾಗಿದ್ದು, ಆಗ ಚನ್ನಪ್ಪ ಈತನು ತನ್ನ ಕೈಗಳನ್ನು ಅಡ್ಡ ತಂದಿದ್ದರಿಂದ ಕೈಗಳಿಗೆ ಮಚ್ಚಿನಿಂದ ಏಟು ಬಿದ್ದಿದೆ. ನಂತರ ಚನ್ನಪ್ಪ ಓಡಲು ಪ್ರಾರಂಭಿಸಿದಾಗ ಆತನನ್ನು ಬೆನ್ನಟ್ಟಿದ್ದು, ಸುಮಾರು 10 ನಿಮಿಷಗಳ ಕಾಲ ಲೇ ಔಟ್‌ನಲ್ಲಿ ಬೆನ್ನಟ್ಟಿ ಹಲ್ಲೆ ಮಾಡಲಾಗಿದೆ.

ಸ್ಕೂಟರ್ ತೆಗೆದುಕೊಂಡು ಬೆನ್ನು ಹತ್ತಿದ ಆರೋಪಿತನು

2ನೇ ಪುಟಕ್ಕೆ

## ಜೋಳ ಖರೀದಿ ಕೇಂದ್ರ ಪ್ರಾರಂಭಿಸುವಂತೆ ರೈತರಿಂದ ಮನವಿ

ಯುವ ಮಾರ್ಗ ಸುದ್ದಿ



**ಮಾನ್ವಿ,ಮೇ.20–** ಪಟ್ಟಣದ ತಹಶೀಲ್ದಾರ್ ಕಛೇರಿ ಆವರಣದಲ್ಲಿ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ರವರಿಗೆ ರೈತ ಕೃಷ್ಣ ಮನವಿ ಸಲ್ಲಿಸಿ ಮಾತನಾಡಿ, ಮಾನ್ವಿ ಭಾಗದ ರೈತರು ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಅಡಿಯಲ್ಲಿ ಜೋಳವನ್ನು ಮಾರಾಟ ಮಾಡುವುದಕ್ಕೆ ಸರ್ಕಾರದ ಸೂಚನೆಯಂತೆ ಮಾನ್ವಿ ಪಟ್ಟಣದ ಟಿ.ಎ.ಪಿ.ಸಿ.ಎಂ.ಎಸ್. ಜೋಳ ಖರೀದಿ ಕೇಂದ್ರದಲ್ಲಿ 5 ತಿಂಗಳ ಕೆಳಗೆ 1510 ರೈತರು ನೊಂದಾಯಿಸಿಕೊಂಡಿದ್ದು ಇನ್ನೂ 341 ಕ್ಕೂ ಹೆಚ್ಚು ರೈತರು ಬೆಳೆದ ಜೋಳ ಖರೀದಿ ಬಾಕಿ ಇದ್ದು ರೈತರು ಟ್ರಾಕ್ಟರ್ ಗಳಲ್ಲಿ ಜೋಳವನ್ನು ಮಾರಾಟಕ್ಕೆಂದು ಟಿ.ಎ.ಪಿ.ಸಿ.ಎಂ.ಎಸ್. ಜೋಳ ಖರೀದಿ ಕೇಂದ್ರಕ್ಕೆ ತಂದ ನಂತರ ಏಕಾಏಕಿ ಅದಿಕಾರಿಗಳು ಮೇ.16 ರಿಂದ ಜೋಳ ಖರೀದಿಯನ್ನು ಸ್ಥಗಿತಗೊಳ್ಳಿಸಿರುವುದರಿಂದ ರೈತರಿಗೆ ಅಪಾರ ನಷ್ಟವಾಗುತ್ತಿದೆ ಅದ್ದರಿಂದ ಕೂಡಲೇ ಜೋಳ ಖರೀದಿ ಕೇಂದ್ರದಿಂದ ಜೋಳ ಖರೀದಿ ಮಾಡಬೇಕು ಇಲ್ಲದೆ ಇದ್ದಲ್ಲಿ ಜೋಳ ತುಂಬಿದ ಟ್ರಾಕ್ಟರ್ ಗಳನ್ನು ತಹಸೀಲ್ದಾರ್ ಕಛೇರಿ ಆವರಣದಲ್ಲಿ ನಿಲ್ಲಿಸಿ ನೂರಾರು ರೈತರೊಂದಿಗೆ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು. ಬಸವ ರಾಜಗೌಡ, ಜಿ.ನರಸಿಂಹ ನಾಯಕ ಕರಡಿಗುಡ್ಡ, ಶರಣಪ್ಪ, ಉಷಾ ಪಾಟೀಲ್, ಸೂರ್ಯ ನಾರಾಯಣ, ಎಸ್. ಹುಲಿಗೆಪ್ಪ, ಮಲ್ಲಯ್ಯ, ಜನಾ ರ್ಧನರೆಡ್ಡಿ, ರೇಣುಕಮ್ಮ,ನಾ ಗೇಂದ್ರ, ರಾಮಾಂಜನೇಯ್ಯ, ನರಸಮ್ಮ, ಮಾರೆಪ್ಪ, ಯಂಕೋಬ, ಆರ್. ವಿ.ಸತ್ಯ ನಾರಾಯಣ, ಭೀಮಣ್ಣ, ಮುಕ್ಕುಂದ,ರುದ್ರಪ್ಪ, ಬಸ್ಸಮ್ಮ, ಎ.ಚಂದ್ರಶೇಖರ, ಶ್ರೀನಿವಾಸ, ಸುಬ್ಬರಾವ್, ಆಂಜನೇಯ್ಯ, ಭಿಮಲಿಂಗ, ಸತ್ತರ್‌ಸಾಬ್, ಲಿಂಗರಾಜು, ಮುದುಕಪ್ಪಗೌಡ,ಸೇರಿದಂತೆ ನೂರಾರು ರೈತರು ಇದ್ದರು.

## ಪಟ್ಟಣದ ವಿವಿಧ ವಾರ್ಡಗಳಲ್ಲಿನ ನಿವೇಶನ ರಹಿತರಿಂದ ಸಚಿವರಿಗೆ ಮನವಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.20–** ಪಟ್ಟಣದ ಪ್ರವಾಸಿ ಮಂದಿರಕ್ಕೆ ಭಾನುವಾರ ಆಗಮಿಸಿದ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ರವರಿಗೆ ಪಟ್ಟಣದ ಆಶ್ರಯ ಕಾಲೋನಿ ಸೇರಿದಂತೆ ವಿವಿಧ ವಾರ್ಡಗಳಲ್ಲಿ ವಾಸಿಸುತ್ತಿರುವ ನಿವಾಸಿಗಳು ಹಾಗೂ ಮಹಿಳೆಯರು ಸಚಿವರಿಗೆ ಪಟ್ಟಣದಲ್ಲಿ ವಾಸಿಸುವುದಕ್ಕೆ ಮನೆ ಇಲ್ಲದೆ ಇರುವುದರಿಂದ ನಿವೇಶನ ನೀಡಿ ಮನೆ ಕಟ್ಟಿಕೊಡುವಂತೆ ಮನವಿ ಸಲ್ಲಿಸಿದರು.

ಮಹಿಳೆಯರಿಂದ ಮನವಿ ಸ್ವೀಕರಿಸಿ ಸಚಿವ ಎನ್.ಎಸ್.ಬೋಸರಾಜು ಮಾತನಾಡಿ, ಪುರಸಭೆ ಅಧ್ಯಕ್ಷರು ಹಾಗೂ ಪುರಸಭೆ ಮುಖ್ಯಾಧಿಕಾರಿಗಳೊಂದಿಗೆ ಚರ್ಚೆ ನಡೆಸಿ ವಸತಿ ರಹಿತರಿಗೆ ನಿವೇಶನ ಕೊಡಿಸುವುದಕ್ಕೆ ಸೂಚನೆ ನೀಡುವುದಾಗಿ ಬರವಸೆ ನೀಡಿದರು. ಬ್ಲಾಕ್ ಕಾಂಗ್ರೆಸ್




ಅಧ್ಯಕ್ಷರಾದ ಅಬ್ದುಲ್ ಗಾಫೂರ್ ಸಾಬ್,ಬಿ.ಕೆ.ಅಮರೇಶಪ್ಪ, ಮಹಾಂತೇಶಸ್ವಾಮಿ, ಜಿ.ನಾಗರಾಜ, ಹೊನ್ನಪ್ಪ ಹೆಳವರ್, ಕನಕಪ್ಪ ಯಾದವ್, ಎಂ.ಡಿ.ಬಾಬಾ ಸತ್ತರ ಬಂಗ್ಲೆವಾಲೆ ಸೇರಿದಂತೆ ಆಶ್ರಯ ಕಾಲೋನಿ ಸೇರಿದಂತೆ ವಿವಿಧ ವಾರ್ಡಗಳ ನೂರಾರು ಮಹಿಳೆಯರು ಇದ್ದರು.

## ಅಂಗಡಿ ಮಾಲೀಕರು ಕಡ್ಡಾಯವಾಗಿ ರೈತರಿಗೆ ರಶೀದಿ ನೀಡಿ : ಶ್ರೀನಿವಾಸ್ ನಾಯಕ್

ಯುವ ಮಾರ್ಗ ಸುದ್ದಿ

**ದೇವದುರ್ಗ, ಮೇ.20–** ರೈತರು ಖರೀದಿ ಮಾಡಿದ ಬಿಲ್ ಮತ್ತು ಪ್ಯಾಕೆಟ್ ಮೂರು ತಿಂಗಳ ಕಾಲ ಉಳಿಸಿಕೊಳ್ಳಬೇಕು ರಸೀದಿಯ ಮೇಲೆ ತಪ್ಪದೆ ಕಂಪನಿ ಹೆಸರು ಬ್ಯಾಚ್ ನಂಬರ್ ನಮೂದಿಸಬೇಕು ಎಂದು ಅಂಗಡಿಯವರಿಗೆ ಸಹಾಯಕ ಕೃಷಿ ನಿರ್ದೇಶಕ ಶ್ರೀನಿವಾಸ ನಾಯಕ ತಿಳಿಸಿದರು. ದೇವದುರ್ಗ ತಾಲೂಕಿನ ಮಹಾಲಕ್ಷ್ಮಿ ಆಗ್ರೋ ಏಜೆನ್ಸಿ, ಬಸವ ಟ್ರೇಡರ್ಸ್ ಗಳಿಗೆ ಬೇಟಿ ನೀಡಿ ಅಂಗಡಿ ಮಾಲಕರಿಗೆ ಮತ್ತು ರೈತರಿಗೆ ಸಂಪೂರ್ಣ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಕೃಷಿ ಅಧಿಕಾರಿಗಳಾದ ಅರ್ಚನಾ, ಶಿವರಾಜ್ ಹಾಗೂ ಅಂಗಡಿಯ ಮಾಲಕರು ಅಪಾರ್ ಜನಸಂಖ್ಯೆಯ ರೈತರು ಇದ್ದರು.



ಯುವ ಮಾರ್ಗ

ಮಂಗಳವಾರ : 20–05–2025

ಮೊದಲನೇಯ ಪುಟದಿಂದ

# ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಕ್ಕೆ ಕ್ರಮವಹಿಸಿ

ಮರಣ ಪ್ರಮಾಣ ಶೂನ್ಯಕ್ಕಿಳಿಯಲಿ: ರಾಜ್ಯದ ಯಾವುದೇ ಕಡೆಗಳಲ್ಲಿ ಗರ್ಭಿಣಿಯರು ಮತ್ತು ಶಿಶುಗಳು ಮರಣ ಆಗದಂತೆ ಸಾಕಷ್ಟು ಮುನ್ನೆಚ್ಚರಿಕೆ ವಹಿಸಬೇಕು ಎಂಬುದು ಮಾನ್ಯ ಮುಖ್ಯಮಂತ್ರಿಗಳು ಮತ್ತು ಮುಖ್ಯ ಕಾರ್ಯದರ್ಶಿಯವರ ಸೂಚನೆಯಾಗಿದೆ. ಹೀಗಾಗಿ ಜಿಲ್ಲೆಯ ಎಲ್ಲ ಪ್ರಾಥಮಿಕ, ಸಮುದಾಯ ಸೇರಿದಂತೆ ಎಲ್ಲಾ ಆಸ್ಪತ್ರೆಗಳಲ್ಲಿ ಗರ್ಭಿಣಿಯರ ಮತ್ತು ಶಿಶು ಆರೋಗ್ಯದ ಕಡೆ ಹೆಚ್ಚಿನ ಗಮನ ಕೊಡಬೇಕು. ನಿರ್ಲಕ್ಷ್ಯ ಮಾಡಬಾರದು. ಜಿಲ್ಲೆಯ ಎಲ್ಲಾ ಕಡೆಗಳಲ್ಲಿ ಗರ್ಭಿಣಿಯರಿಗೆ ಸಕಾಲಕ್ಕೆ ಸೂಕ್ತ ಚಿಕಿತ್ಸೆ ಲಭ್ಯವಾಗುವಂತೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ಮಾಡಬೇಕು ಎಂದು ಕಾರ್ಯದರ್ಶಿಗಳು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಯಚೂರ ಜಿಲ್ಲೆಯಲ್ಲಿ ಗರ್ಭಿಣಿಯರ ಮರಣ ಪ್ರಕರಣಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮವಾಗಿ ವಿಶೇಷ ತಜ್ಞವೈದ್ಯರ ತಂಡವೊಂದು ಈ ಬಗ್ಗೆ ನಿಗಾವಹಿಸಿ ಕಾರ್ಯನಿರ್ವಹಿಸುತ್ತಿದೆ. ತುರ್ತು ಚಿಕಿತ್ಸೆ ಅವಶ್ಯಕತೆ ಕಾಣಿಸುವ ಗರ್ಭಿಣಿಯರನ್ನು ಕೂಡಲೇ ಜಿಲ್ಲಾಸ್ಪತ್ರೆಗೆ ದಾಖಲು ಮಾಡಿ ಕ್ರಮವಹಿಸಲಾಗುತ್ತಿದೆ. ತಾಯಂದಿರ ಮರಣ ತಡೆಗೆ ಸಂಬಂಧಿಸಿದಂತೆ ನರ್ಸಗಳಿಗೆ ತರಬೇತಿಗೆ ವ್ಯವಸ್ಥೆ ಮಾಡಲಾಗಿದೆ ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದರು.ಸಿಎಸ್ಆರ್ ಫಂಡನಲ್ಲಿ 8 ಡಯಾಲಿಸಿಸ್ ಮಸೀನ್ ಖರೀದಿಸಲಾಗಿದೆ. ತಾಯಂದಿರ ಮರಣ ತಗ್ಗಿಸುವ ಭಾಗವಾಗಿ ಉಪ ಕೇಂದ್ರಗಳಲ್ಲಿ ಈಗಾಗಲೇ ಜಾಗೃತಿ ಕಾರ್ಯಕ್ರಮ ನಡೆಸಲಾಗಿದೆ. ಕಳೆದ ವರ್ಷ ಲಿಂಗಸೂರ ತಾಲೂಕಿನಲ್ಲಿ ಮಲೇರಿಯಾ ಪ್ರಕರಣಗಳು ವರದಿಯಾಗಿದ್ದವು. ಈ ಬಾರಿ ಯಾವುದೇ ಕಡೆಗಳಲ್ಲಿ ಮಲೇರಿಯಾ, ಚಿಕೂನ್‌ಗುನ್ಯ, ಡೆಂಗೆ ಪ್ರಕರಣಗಳು ವರದಿಯಾಗಿಲ್ಲ. ದೇವದುರ್ಗ ತಾಲೂಕಿನ ಬಹುತೇಕ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞವೈದ್ಯರ ಕೊರತೆಯಾಗಿದೆ ಎಂದು ಡಿಎಚ್ಓ ಅವರು ಸಭೆಗೆ ಮಾಹಿತಿ ನೀಡಿದರು. ಫಲಿತಾಂಶ ಸುಧಾರಣೆಗೆ ಒತ್ತು ಕೊಡಿ: 2023–24 ಮತ್ತು 2024–25ನೇ ಸಾಲಿನ ಎರಡು ವರ್ಷದಲ್ಲಿ ದೇವದುರ್ಗ ತಾಲೂಕಿನಲ್ಲಿ ಶೇ.52.37., ಲಿಂಗಸೂರ ತಾಲೂಕಿನಲ್ಲಿ ಶೇ.48.37., ಮಾನವಿ ತಾಲೂಕಿನಲ್ಲಿ ಶೇ.46.94ರಷ್ಟು, ರಾಯಚೂರ ತಾಲೂಕಿನಲ್ಲಿ ಶೇ.44.81 ರಷ್ಟು ಮತ್ತು ಸಿಂಧನೂರ ತಾಲೂಕಿನಲ್ಲಿ ಶೇ.64.43ರಷ್ಟು ಮಕ್ಕಳು ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. 20023–24ರಲ್ಲಿ ಜಿಲ್ಲೆಯ ಒಟ್ಟಾರೆ ಫಲಿತಾಂಶ ಶೇ.63.49ರಷ್ಟು ಇತ್ತು. 2024–25ನೇ ಸಾಲಿನಲ್ಲಿ ಶೇ.52.05ಕ್ಕೆ ಕುಸಿದಿದೆ. ಈ ಫಲಿತಾಂಶ ಕುಸಿತಕ್ಕೆ ಏನು ಕಾರಣ ಎಂಬುದನ್ನು ಪತ್ತೆ ಹಚ್ಚಬೇಕು. ಈ ವಿಷಯದ ಬಗ್ಗೆ ಎಲ್ಲ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ವಿಶೇಷ ಗಮನ ಹರಿಸಬೇಕು. ಇನ್ನುಳಿದ ಶಿಕ್ಷಣ ಇಲಾಖೆಯ ಅಧಿಕಾರಿಗಳು ಕಾಳಜಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಇತ್ತೀಚೆಗೆ ನಡೆದ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳು ಮರುಪರೀಕ್ಷೆಗಾಗಿ ಈಗಾಗಲೇ ಶೇ.100 ರಷ್ಟು ನೋಂದಣಿ ಮಾಡಿದ್ದಾರೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದೆ ಎಂದು ಡಿಡಿಪಿಐ ಬಡಿಗೇರ ಅವರು ಕಾರ್ಯದರ್ಶಿಗಳಿಗೆ ಮಾಹಿತಿ ನೀಡಿದರು. ಕ್ರಿಯಾ ಯೋಜನೆ ಪರಿಶೀಲನೆ: 2025–26ನೇ ಸಾಲಿನ ಜಿಲ್ಲಾ ವಲಯ ಕಾರ್ಯಕ್ರಮಗಳ ವಿವಿಧ ಇಲಾಖೆಗಳ ಸಿವಿಲ್ ಕಾಮಗಾರಿಗಳ ಕ್ರಿಯಾ ಯೋಜನೆಯ ಬಗ್ಗೆ ಇದೆ ವೇಳೆ ಕಾರ್ಯದರ್ಶಿಗಳು ಆಯಾ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದರು. ಕ್ರಿಯಾ ಯೋಜನೆಗೆ ಅನುಮೋದನೆ: 2025–26ನೇ ಸಾಲಿನ ಜಿಲ್ಲಾ ಪಂಚಾಯತ್ ಜಿಲ್ಲಾ ವಲಯ ಕಾರ್ಯಕ್ರಮಗಳ ವಾರ್ಷಿಕ ಕ್ರಿಯಾ ಯೋಜನೆಗಳ ಬಗ್ಗೆ ಇದೆ ವೇಳೆ ಪರಿಶೀಲನೆ ನಡೆಸಿದ ಕಾರ್ಯದರ್ಶಿಗಳು ಸಭೆಯಲ್ಲಿ ಅನುಮೋದನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ, ರಾಯಚೂರ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪತ್ರ, ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

# ಹೊಸಪೇಟೆಯಲ್ಲಿ ಕಾಂಗ್ರೆಸ್‌ನಿಂದ ಸಾಧನಾ ಸಮಾವೇಶ

ನಾಲ್ಕು ಲಕ್ಷ ಜನರ ಆಗಮನ ನಿರೀಕ್ಷೆ ಈ ಸಮಾವೇಶಕ್ಕೆ ರಾಜ್ಯದ ಮೂಲೆ ಮೂಲೆಗಳಿಂದ 4 ಲಕ್ಷ ಜನ ಆಗಮಿಸುವ ನಿರೀಕ್ಷೆಯಿದ್ದು, ಈ ಸಮಾವೇಶದಲ್ಲಿ ರಾಜ್ಯದ ಗ್ಯಾರಂಟಿ ಯೋಜನೆಯ 1 ಲಕ್ಷ ಫಲಾನುಭವಿಗಳು ಪಾಲ್ಗೊಳ್ಳುವರು.

ಕಾಂಗ್ರೆಸ್‌ನ ಈ ಸಾಧನೆಯ ಸಮಾವೇಶಕ್ಕಾಗಿ ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಬೃಹತ್ ವೇದಿಕೆಯನ್ನು ನಿರ್ಮಿಸಲಾಗಿದ್ದು, ವೇದಿಕೆಯ ಉದ್ದ 70 ಅಡಿ, ಅಗಲ 200 ಅಡಿ ಇರಲಿದೆ.

ಈ ಸಮಾವೇಶದಲ್ಲಿ 1.5 ಲಕ್ಷ ಆಸನಗಳ ವ್ಯವಸ್ಥೆ ಮಾಡಲಾಗಿದೆ. ಸಮಾವೇಶಕ್ಕೆ ಬರುವವರಿಗೆ ಊಟ, ಉಪಚಾರದ ವ್ಯವಸ್ಥೆಗಳನ್ನು ಮಾಡಲಾಗಿದೆ. ಸಮಾವೇಶದಲ್ಲಿ ಪಾಲ್ಗೊಳ್ಳುವರಿಗೆ ಕುಡಿಯುವ ನೀರು, ಮಜ್ಜಿಗೆ ವಿತರಿಸುವ ವ್ಯವಸ್ಥೆಯನ್ನು ಮಾಡಲಾಗಿದ್ದು, ಸುಮಾರು 5 ಲಕ್ಷ ಪ್ಯಾಕೆಟ್ ನೀರು, 3 ಲಕ್ಷ ಪ್ಯಾಕೆಟ್ ಮಜ್ಜಿಗೆ, 2.50 ಲಕ್ಷ ಜನರಿಗೆ ಊಟದ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ.

ಸಮಾವೇಶ ನಡೆಯುವ ಹೊಸಪೇಟೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಪ್ರಧಾನ ವೇದಿಕೆಯ ಅಕ್ಕಪಕ್ಕ ಬೃಹತ್ ಎಲ್‌ಇಡಿ ಪರದೆಗಳನ್ನು ಅಳವಡಿಸಲಾಗಿದೆ. ಸಮಾವೇಶದ ಪ್ರಧಾನ ವೇದಿಕೆಗೆ ಜರ್ಮನ್ ಟೆಂಟ್ ಹಾಕಲಾಗಿದೆ. ಪ್ರಧಾನ ವೇದಿಕೆಯಲ್ಲಿ 300 ಜನ ಗಣ್ಯರಿಗೆ ಆಸನದ ವ್ಯವಸ್ಥೆ ಮಾಡಲಾಗಿದೆ. ಇದು 2ನೇ ಸಿದ್ದರಾಮೋತ್ಸವ ಆಗಲಿದೆ ಎಂದು ಜಮೀರ್ ಅಹಮದ್ ಖಾನ್ ಹೇಳಿದ್ದಾರೆ.

ಈ ಸಮಾವೇಶದಲ್ಲಿ ಪಾಲ್ಗೊಳ್ಳಲು ಕಾಂಗ್ರೆಸ್‌ನ ವರಿಷ್ಠ ನಾಯಕರಾದ ರಾಹುಲ್‌ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ರಣದೀಪ್ ಸಿಂಗ್ ಸುರ್ಜೇವಾಲಾ ಇವರುಗಳು ದೆಹಲಿಯಿಂದಲೇ ವಿಶೇಷ ವಿಮಾನದ ಮೂಲಕ ಬಳ್ಳಾರಿಗೆ ಆಗಮಿಸಿ, ಅಲ್ಲಿಂದ ಹೊಸಪೇಟೆಗೆ ಹೆಲಿಕಾಪ್ಟರ್‌ನಲ್ಲಿ ಬರುವರು. ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಳಿಗ್ಗೆ ಬೆಂಗಳೂರಿನಿಂದ ವಿಶೇಷ ವಿಮಾನದಲ್ಲಿ ಹೊಸಪೇಟೆಗೆ ತೆರಳುವರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈಗಾಗಲೇ ಹೊಸಪೇಟೆಯಲ್ಲೇ ಮೊಕ್ಕಾಂ ಹೂಡಿದ್ದು, ಸಮಾವೇಶದ ಸಿದ್ದತೆಗಳ ಪರಿಶೀಲನೆಯನ್ನು ನಡೆಸಿದ್ದಾರೆ. ಉಳಿದಂತೆ ಎಲ್ಲ ಸಚಿವರು, ಶಾಸಕರುಗಳು ನಾಳೆ ಹೊಸಪೇಟೆಗೆ ಆಗಮಿಸುವರು.

# ಯೋಧನಿಗೆ ಮಚ್ಚಿನಿಂದ ಹೊಡೆದು ಹಲ್ಲೆ

ಕಸಬಾಲಿಂಗಸ್ಗೂರು ಮುಂಚೆ ಬರುವ ಪರಮಾನಂದ ನಗರದ ಹತ್ತಿರ ಆಟೋಕ್ಕೆ ತನ್ನ ಗಾಡಿಯನ್ನು ಅಡ್ಡ ಹಾಕಿದ್ದು, ಆಗ ಯೋಧನು ರಸ್ತೆ ಬಾಜು ಇರುವ ಕಾಡಿನಲ್ಲಿ ತಪ್ಪಿಸಿಕೊಂಡು ಬೆಂಗಳೂರು ಬೈಪಾಸ್ ರಸ್ತೆಗೆ ಬಂದು, ಅಲ್ಲಿಂದ ಲಿಂಗಸ್ಗೂರು ಪೊಲೀಸ್ ಠಾಣೆಗೆ ಬಂದು ಮಾಹಿತಿ ನೀಡಿ ಆಸ್ಪತ್ರೆಗೆ ಹೋಗಿದ್ದಾನೆ ಆರೋಪಿತನು ಆಸ್ಪತ್ರೆಗೆ ಸಹ ಹೋಗಿದ್ದರಿಂದ ಪೊಲೀಸ್‌ರು ಆತನ್ನನ್ನು ವಶಕ್ಕೆ ಪಡೆದುಕೊಂಡು ಠಾಣೆಯಲ್ಲಿ ವಿಚಾರಣೆ ಮುಂದುವರಿಸಿದ್ದಾರೆ.

ಹಿನ್ನಲೆ: ಕಸಬಾಲಿಂಗಸ್ಗೂರು ಸೀಮಾಂತರದಲ್ಲಿರುವ ಚನ್ನಪ್ಪ ಇವರ ಸಹೋದರಿಯ 1 ಎಕರೆ ಜಮೀನಿನಲ್ಲಿ ಆರೋಪಿತರು ಕಳೆದ 20–25 ವರ್ಷಗಳಿಂದ ಕಬ್ಜದಲ್ಲಿದ್ದು, ಇತ್ತೀಚಿಗೆ ಸರ್ವೆ ಮಾಡಿಸಿ ಚನ್ನಪ್ಪ ಇತನು ಜಮೀನು ತಗೆದುಕೊಳ್ಳುವ ಪ್ರಯತ್ನ ಮಾಡಿದ್ದರಿಂದ ಇಬ್ಬರ ಮಧ್ಯೆ ದ್ವೇಷ ಇದೆ ಎಂದು ಸ್ಥಳೀಯರಿಂದ ಮಾಹಿತಿ ತಿಳಿದು ಬಂದಿದೆ.


ಆರೋಪಿತರು ಕಬ್ಜದಲ್ಲಿರುವ ಚನ್ನಪ್ಪನ ಸಹೋದರಿಯ ಜಮೀನು ಮತ್ತು ಆರೋಪಿತನ ಮೂಲ ಜಮೀನಿನ ಮಧ್ಯೆ ಹೊಡ್ಡು ಇದ್ದು, ಸರ್ವೆ ಮಾಡಿಸಿದ ನಂತರ ಚನ್ನಪ್ಪ ಇತನು ಹೊಡ್ಡನ್ನು ಕೆಡಿಸಿದ್ದರಿಂದ ಜಮೀನಿನೊಳಗೆ ನೀರು ಬರುತ್ತವೆ ಅಂತಾ ಇಬ್ಬರ ಮಧ್ಯ ವಾಗ್ವಾದ ಉಂಟಾಗಿದ್ದು, ಈ ಬಗ್ಗೆ ಎರಡು ಸಲ ಠಾಣೆಗೆ ಬಂದು ಹೋಗಿರುವುದಾಗಿ ಆರೋಪಿತನಿಂದ ಮಾಹಿತಿ ತಿಳಿದು ಬಂದಿದೆ,

ಚನ್ನಪ್ಪ ಇವರು ಕಳೆದ ಒಂದು ತಿಂಗಳ ಹಿಂದೆ ರಜೆಯ ಮೇಲೆ ಗ್ರಾಮಕ್ಕೆ ಬಂದಿದ್ದಾರೆ. ಘಟನೆಯಿಂದ ಸಾರ್ವಜನಿಕರು ಭಯಗೊಂಡಿದ್ದು, ಸಾರ್ವಜನಿಕ ಸ್ಥಳದಲ್ಲಿ ಮಚ್ಚು ತೆಗೆದುಕೊಂಡು ಹೊಡೆದಾಡುವುದು ಇದು ಎರಡನೇಯ ಬಾರಿಯಾಗಿರುತ್ತದೆ. ಕಳೆದ ಆರು ತಿಂಗಳುಗಳ ಹಿಂದೆ ಕೆಲ ಪುಂಡರು ಲಿಂಗಸ್ಗೂರು ಪಟ್ಟಣದ ಬಸವಸಾಗರ ಕ್ರಾಸ ಹತ್ತಿರ ಇರುವ ಬೇಕರಿಯ ಮೇಲೆ ಮಚ್ಚಿನಿಂದ ದಾಳಿ ಮಾಡಿದ್ದರು, ಆರೋಪಿತನನ್ನು ವಶಕ್ಕೆ ಪಡೆದಿರುವುದರಿಂದ ಸದ್ಯಕ್ಕೆ ಪರಸ್ಥಿತಿ ಶಾಂತವಾಗಿದೆ. ಯೋಧನ ಮೇಲೆ ಮರಣಾಂತಿಕ ಹಲ್ಲೆ ನಡೆದಿದ್ದು, ಪಟ್ಟಣದ ಸಾಮಾನ್ಯರ ಪರಿಸ್ಥಿತಿ ಹೇಗೆ ಎಂದು ಸಾರ್ವಜನಿಕರು ಮಾತನಾಡಿಕೊಳ್ಳುತ್ತಿದ್ದಾರೆ.

# ಸೂರ್ಯಕಾಂತಿ ಖರೀದಿ ಕೇಂದ್ರಗಳ ಸ್ಥಾಪನೆ

ಮೊಬೈಲ್ ಸಂಖ್ಯೆ: 9743695467, ದೇವದುರ್ಗ ತಾಲೂಕಿನ ಜಾಲಹಳ್ಳಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಕಾರ್ಯದರ್ಶಿ ನರಸಿಂಗ ನಾಯಕ ಮೊಬೈಲ್ ಸಂಖ್ಯೆ: 7899312989, ಲಿಂಗಸುಗೂರು ತಾಲೂಕಿನ ಮಟ್ಟೂರು ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಕಾರ್ಯದರ್ಶಿ ವೀರೇಶ ದೇಸಾಯಿ ಮೊಬೈಲ್ ಸಂಖ್ಯೆ: 9113649836, ಸಿಂಧನೂರು ತಾಲೂಕಿನ ಜವಳಗೇರಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಕಾರ್ಯದರ್ಶಿ ದೇವರಾಜ ಮೊಬೈಲ್ ಸಂಖ್ಯೆ: 9964165509, ಹುಡಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಕಾರ್ಯದರ್ಶಿ ಚನ್ನನಗೌಡ ಮೊಬೈಲ್ ಸಂಖ್ಯೆ: 9964315868, ಮಾನವಿ ತಾಲೂಕಿನ ತೋರಣದಿನ್ನಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಕಾರ್ಯದರ್ಶಿ ಬಸಯ್ಯ .ಟಿ ಮೊಬೈಲ್ ಸಂಖ್ಯೆ: 9902387316, ಸಿರವಾರದ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಕಾರ್ಯದರ್ಶಿ ನಿಂಬಯ್ಯ ಸ್ವಾಮಿ ಮೊಬೈಲ್ ಸಂಖ್ಯೆ: 9880891919ಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ರೈತರ ಬಾಂಧವರು ಫ್ರೂಟ್ಸ್ ಐ.ಡಿ ಯೊಂದಿಗೆ ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿ ಸೂರ್ಯಕಾಂತಿ ಮಾರಾಟ ಮಾಡಿ ಸರ್ಕಾರದ ಯೋಜನೆಯ ಸದುಪಯೋಗ ಪಡಿಸಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದಲ್ಲಿ ಇನ್ನೂ ನಾಲ್ಕು ದಿನ ಮುಂದುವರೆಯಲಿದೆ ಮಳೆಯ ಅಬ್ಬರ




**ಬೆಂಗಳೂರು, ಮೇ.20**–ನೈರುತ್ಯ ಮುಂಗಾರು ಆರಂಭಕ್ಕೂ ಮುನ್ನವೇ ರಾಜ್ಯದಲ್ಲಿ ಮಳೆ ಅಬ್ಬರಿಸಿ ಅರ್ಭಟಿಸುತ್ತಿದೆ. ಕಳೆದ ಎಂಟು ಹತ್ತು ದಿನಗಳಿಂದ ಚದುರಿದಂತೆ ಬೀಳುತ್ತಿದ್ದ ಮಳೆ ಕಳೆದ ಎರಡು ದಿನಗಳಿಂದ ವ್ಯಾಪಕ ಪ್ರವಾಣದಲ್ಲಿ ಮಳೆಯಾಗುತ್ತಿದೆ. ಹವಾಮಾನ ಮುನ್ಸೂಚನೆ ಪ್ರಕಾರ ಮುಂದಿನ ನಾಲ್ಕು ದಿನಗಳ ಕಾಲ ರಾಜ್ಯದ ಕೆಲವೆಡೆ ಭಾರಿ ಮಳೆಯಾಗುವ ಸಾಧ್ಯತೆಗಳಿವೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ಕೆಂಗೇರಿಯಲ್ಲಿ ಅತ್ಯಧಿಕ 132 ಮಿ.ಮೀ. ಭಾರಿ ಮಳೆಯಾಗಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಚಾಮರಾಜನಗರ, ಕೋಲಾರ, ಯಾದಗಿರಿ, ಮೈಸೂರು, ಮಂಡ್ಯ, ಬೆಳಗಾವಿ, ಧಾರವಾಡ, ವಿಜಯಪುರ, ಕೊಡಗು, ಚಿಕ್ಕಬಳ್ಳಾಪುರ, ಹಾಸನ ಸೇರಿದಂತೆ 15 ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಿದೆ.

ಕಲಬುರಗಿ, ಕೊಪ್ಪಳ, ರಾಯಚೂರು, ಬಾಗಲಕೋಟೆ, ಗದಗ ಜಿಲ್ಲೆಗಳಲ್ಲಿ ಸಾಧಾರಣ ವ್ಯಾಪಕ ಮಳೆಯಾಗಿದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಬೀದರ್, ಚಿಕ್ಕಮಗಳೂರು, ಬಳ್ಳಾರಿ, ಚಿತ್ರದುರ್ಗ, ಹಾವೇರಿ. ವಿಜಯನಗರ, ದಾವಣಗೆರೆ ಉಡುಪಿ ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಅಲ್ಲಲ್ಲಿ ಚದುರಿದಂತೆ ಮಳೆಯಾಗಿದೆ.

ಪೂರ್ವ ಮುಂಗಾರು ಮಳೆ ನಿರಂತರವಾಗಿ ಬೀಳುತ್ತಿರುವುದರಿಂದ ಬೇಸಿಗೆಯ ಬಿರು ಬಿಸಿಲು, ಸೆಕೆ ದೂರ ಸರಿದು ತಂಪಾದ ವಾತಾವರಣ ಕಂಡುಬರುತ್ತಿದೆ. ಹೀಗಾಗಿ ಬೇಸಿಗೆಯಲ್ಲೂ ಮಳೆಗಾಲದ ಅನುಭವವಾಗುತ್ತಿದೆ. ವಾತಾವ ರಣದಲ್ಲಿ ಆಗಿರುವ ಸಾಕಷ್ಟು ಬದಲಾವಣೆಗಳಿಂದ ಮುಂಗಾರು ಆರಂಭದ ಪ್ರಕ್ರಿಯೆಗಳು ಆರಂಭಗೊಂಡಿದ್ದು, ಮೋಡ ಹಾಗೂ ಮಳೆಯ ಸನ್ನಿವೇಶ ಸೃಷ್ಟಿಯಾಗಿದೆ.

ಇನ್ನೊಂದು ವಾರದಲ್ಲಿ ಮುಂಗಾರು ಮಳೆ ಪ್ರಾರಂಭವಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಆದರೆ, ಈಗಾಗಲೇ ಮುಂಗಾರು ಮಳೆಯ ವಾತಾವರಣ ಕಂಡುಬರುತ್ತಿದ್ದು, ರಾಜ್ಯದ ಬಹುತೇಕ ಎಲ್ಲಾ ಜಿಲ್ಲೆಗಳಲ್ಲೂ ಮಳೆಯಾಗುತ್ತಿದೆ. 15ರಿಂದ 20 ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದಲ್ಲಿ ಮಳೆಯಾಗಿದೆ.

ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ನಿನ್ನೆ ಹಾಗೂ ಕಳೆದ ರಾತ್ರಿ ಧಾರಾಕಾರ ಮಳೆಯಾಗಿದೆ. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಮುಂಗಾರು ಪೂರ್ವ ಮಳೆಗೆ ಕೆಲವೆಡೆ ಮರಗಳು ಉರುಳಿ ಬಿದ್ದಿದ್ದು, ವಿದ್ಯುತ್ ಸಂಪರ್ಕಕ್ಕೂ ಹಾನಿಯಾಗಿದೆ. ರಸ್ತೆ ಸಂಚಾರಕ್ಕೂ ತೊಂದರೆಯಾಗಿದೆ.

ಬಂಗಾಳದ ಉಪ ಸಾಗರದಲ್ಲಿ ಮೇಲೆ ಸುಳಿಗಾಳಿ, ರಾಜ್ಯದ ಒಳನಾಡಿನಲ್ಲಿ ಟ್ರಫ್ ನಿರ್ಮಾಣವಾಗಿದೆ. ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತ ಉಂಟಾಗುತ್ತಿದ್ದು ಭಾರಿ ಮಳೆಯಾಗುವ ಮುನ್ಸೂಚನೆಗಳಿವೆ ಎಂದು ಭಾರತೀಯ ಹವಾಮಾನ ಇಲಾಖೆಯ ಬೆಂಗಳೂರು ಪ್ರಾದೇಶಿಕ ಕೇಂದ್ರದ ನಿರ್ದೇಶಕ ಸಿ.ಎಸ್. ಪಾಟೀಲ್ ತಿಳಿಸಿದ್ದಾರೆ.

ವಾತಾವರಣದಲ್ಲಾಗಿರುವ ಈ ಬದಲಾವಣೆಯಿಂದ ಮೋಡ ಕವಿದ ವಾತಾವರಣ ಇರಲಿದೆ. ಇದರಿಂದ ಗರಿಷ್ಠ ತಾಪಮಾನದಲ್ಲಿ ಗಣನೀಯ ಇಳಿಕೆಯಾಗಿದೆ. ಸಂಜೆ ಹಾಗೂ ರಾತ್ರಿ ವೇಳೆ ಗುಡುಗು, ಮಿಂಚು ಹಾಗೂ ಗಂಟೆಗೆ 40–50 ಕಿ.ಮೀ.ವೇಗದಲ್ಲಿ ಗಾಳಿ ಸಹಿತ ಮಳೆಯಾಗುವ ಹೆಚ್ಚಿನ ಸಾಧ್ಯತೆಗಳಿವೆ ಎಂದು ಅವರು ಹೇಳಿದ್ದಾರೆ.

ಅರಬ್ಬಿ ಸಮುದ್ರದಲ್ಲಿ ಮೇ 22ರ ವೇಳೆಗೆ ವಾಯುಭಾರ ಕುಸಿತ ಉಂಟಾಗುವ ಸಾಧ್ಯತೆ ಇದೆ. ಹೀಗಾಗಿ ನಾಲ್ಕು ದಿನಗಳ ಕಾಲ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಲಿದೆ. ಕರಾವಳಿ, ಮಲೆನಾಡು, ಉತ್ತರ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದ ಭಾರಿ ಮಳೆಯಾಗುವ ಮುನ್ಸೂಚನೆಗಳಿವೆ.

ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಿಗೆ ಭಾರಿ ಮಳೆ ಮುನ್ಸೂಚನೆ ಹಿನ್ನೆಲೆಯಲ್ಲಿ ಯೆಲ್ಲೂ ಅಲರ್ಟ್ ಘೋಷಣೆ ಮಾಡಲಾಗಿದೆ ಎಂದು ಪಾಟೀಲ್ ತಿಳಿಸಿದ್ದಾರೆ.

# ಪುಸ್ತಕ ಗೋದಾಮಿಗೆ ಬೆಂಕಿ: 2 ಲಕ್ಷ ಪುಸ್ತಕಗಳು ಭಸ್ಮ



**ಕಲಬುರಗಿ,ಮೇ.20**–ಆಳಂದ ಪಟ್ಟಣದಲ್ಲಿ ಶಿಕ್ಷಣ ಇಲಾಖೆಗೆ ಸೇರಿದ ಪುಸ್ತಕ ಗೋದಾಮಿಗೆ ಶುಕ್ರವಾರ ಮಧ್ಯಾಹ್ನ ಬೆಂಕಿ ತಗುಲಿದ ಘಟನೆ ನಡೆದಿದೆ. ಪ್ರಸಕ್ತ ಸಾಲಿಗೆ 4ರಿಂದ 8ನೇ ತರಗತಿಗೆ

ವಿವಿಧ ಶಾಲೆಗಳಿಗೆ ವಿತರಣೆಗಾಗಿ ದಾಸ್ತಾನು ಮಾಡಿದ್ದ ಪುಸ್ತಕ ಕೋಣೆಗೆ ಬೆಂಕಿ ತಗುಲಿ ಭಾರೀ ನಷ್ಟವಾಗಿದೆ. ಘಟನೆಯಲ್ಲಿ ಒಂದು ಕೋಣೆಯಲ್ಲಿನ ಸುಮಾರು 2 ಲಕ್ಷಕ್ಕೂ ಅಧಿಕ ಪುಸ್ತಕಗಳು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದ್ದು. ಒಟ್ಟು 1 ಕೋಟಿ ರೂ.ಗೂ ಹೆಚ್ಚಿನ ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ.ಅಲ್ಲದೆ ಇನ್ನೊಂದು ಕೋಣೆಯಲ್ಲಿ ಪುಸ್ತಕಗಳು ಸುರಕ್ಷಿತವಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳೀಯ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಲು ಪ್ರಯತ್ನ ನಡೆಸಿದರೂ, ಬೆಂಕಿಯ ತೀವ್ರತೆಯಿಂದಾಗಿ ಯಶಸ್ವಿಯಾಗಲಿಲ್ಲ.ಶಾಲೆಗಳಿಗೆ ವಿತರಣೆಯಾಗಬೇಕಿದ್ದ ಪಠ್ಯಪುಸ್ತಕಗಳು, ಕಲಿಕಾ ಸಾಮಗ್ರಿಗಳು ಮತ್ತು ಇತರ ಶೈಕ್ಷಣಿಕ ದಾಖಲೆಗಳು ಬೆಂಕಿಗೆ ಆಹುತಿಯಾಗಿವೆ ಎನ್ನಲಾಗಿದೆ. ಘಟನಾ ಸ್ಥಳಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ರಂಗಸ್ವಾಮಿ ಶೆಟ್ಟಿ, ಪ್ರೌಢಶಾಲೆ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಮರೆಪ್ಪ ಬಡಿಗೇರ, ಬಿಆ???ಸಿ ಅಣ್ಣಪ್ಪ ಹಾದಿಮನಿ, ಇಸಿಓ ಶ್ರೀಮಂತ ಪಾಟೀಲ ಭೇಟಿ ನೀಡಿದ್ದಾರೆ.

ಸ್ಥಳೀಯ ಪೊಲೀಸ್ ಠಾಣೆಯ ಪಿಐ ಶರಣಬಸಪ್ಪ ಕೋಡ್ಲಾ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬೆಂಕಿಗೆ ಕಾರಣ ತಿಳಿದುಬಂದಿಲ್ಲವಾದರೂ, ಶಿಕ್ಷಣಾಧಿಕಾರಿಗಳು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆಯನ್ನು ಚುರುಕುಗೊಳಿಸಿದ್ದಾರೆ.

# 2 ವರ್ಷದಲ್ಲಿ ವಿನಿಯೋಗಿಸಿದ ಹಣದ ಕುರಿತು ಶ್ವೇತಪತ್ರಕ್ಕೆ ಆಗ್ರಹ



**ಬೆಂಗಳೂರು,ಮೇ20**– ರಾಜಧಾನಿ ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿಗೆ ಕಳೆದ ಎರಡು ವರ್ಷದಲ್ಲಿ ವಿನಿಯೋಗಿಸಿದ ಹಣ ಎಷ್ಟು ? ಈ ಬಗ್ಗೆ ಮೊದಲು ಶ್ವೇತಪತ್ರ ಪ್ರಕಟಿಸಿ ಎಂದು ಶಾಸಕ ಹಾಗೂ ಮಾಜಿ ಸಚಿವ ಸುನಿಲ್ ಕುಮಾರ್ ಅವರು ರಾಜ್ಯ ಸರ್ಕಾರಕ್ಕೆ ಆಗ್ರಹ ಮಾಡಿದ್ದಾರೆ.

ಈ ಕುರಿತು ತಮ್ಮ ಅಧಿಕೃತ ಸಾಮಾಜಿಕ ಜಾಲ ತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ರೋಮ್ ಗೆ ಬೆಂಕಿ ಬಿದ್ದಾಗ ಅಲ್ಲೊಬ್ಬ ಪಿಟೀಲು ಬಾರಿಸುತ್ತಿದ್ದನಂತೆ, ರಾಜಧಾನಿ ಬೆಂಗಳೂರು ಮಳೆಯಿಂದ ಮುಳುಗಿದಾಗ ಇಲ್ಲಿನ ಸರ್ಕಾರ ಸಾಧನಾ ಸಮಾವೇಶ ನಡೆಸುತ್ತಿದೆ. ಎಂದು ವಾಗ್ದಳಿ ನಡೆಸಿದ್ದಾರೆ.

ಗ್ರೇಟರ್ ಬೆಂಗಳೂರು ವಾಟರ್ ನಲ್ಲಿ ಮುಳುಗಿರುವಾಗ ನಾಗರಿಕ ಸಂಕಷ್ಟಕ್ಕೆ ನೆರವಾಗಬೇಕಿದ್ದ ಕಾಂಗ್ರೆಸ್ ಶಾಸಕರು, ಸಚಿವರು ಹೊಸಪೇಟೆಗೆ ದೌಡಾಯಿಸುತ್ತಿದ್ದಾರೆ. ಬೆಂಗಳೂರಿನ ಜನರು ಕಷ್ಟದಲ್ಲಿರುವಾಗ ಈ ಸಂಭ್ರಮ ಬೇಕೇ? ಈ ದುರಾಡಳಿತವನ್ನು ನಿಮ್ಮ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಬೆಂಬಲಿಸುತ್ತಾರೆಯೇ? ಎಂದು ಸುನಿಲ್ ಕುಮಾರ್ ಪ್ರಶ್ನೆ ಮಾಡಿದ್ದಾರೆ.

# ನಮ್ಮ ಬದುಕಿನಲ್ಲಿ ಏನೇನು ಇರಬೇಕು

ತತ್ವಶಾಸ್ತ್ರದ ತರಗತಿಯಲ್ಲಿ ಪ್ರವೇಶಿಸಿದ ಪ್ರೊಫೆಸರರ ಕೈಯಲ್ಲಿ 5 ಲೀಟರ್ ನ ಒಂದು ದೊಡ್ಡ ಗಾಜಿನ ಜಾಡಿ ಇತ್ತು. ವೇದಿಕೆಯನ್ನು ಏರಿದ ಆತ ಆ ಜಾಡಿಯನ್ನು ಅಲ್ಲಿಯೇ ಇದ್ದ ಟೇಬಲ್ನ ಮೇಲೆ ಇಟ್ಟ. ನಂತರ ತಾನು ತಂದ ಹೆಗಲ ಚೀಲದಿಂದ ದೊಡ್ಡ ಕಲ್ಲುಗಳನ್ನು ತೆಗೆದು ಜಾಡಿಯ ಮೇಲ್ಭಾಗದವರೆಗೆ ಬರುವಂತೆ ಒಂ ದೊಂದಾಗಿ ಆ ಜಾಡಿಯಲ್ಲಿ ತುಂಬತೊಡಗಿದ. ವಿದ್ಯಾರ್ಥಿ ಗಳೆಲ್ಲರೂ ಆಶ್ಚರ್ಯದಿಂದ ಈ ವಿದ್ಯಮಾನವನ್ನು ನೋಡುತ್ತಿದ್ದರು. ದೊಡ್ಡ ಕಲ್ಲುಗಳನ್ನು ತುಂಬಿದ ನಂತರ ದೊಡ್ಡದಾದ ಉಸಿರನ್ನು ಬಿಟ್ಟ ಆತ ವಿದ್ಯಾರ್ಥಿಗಳತ್ತ ತಿರುಗಿ ಈ ಜಾಡಿ ಈಗ ತುಂಬಿದೆ ಎಂದು ನಿಮಗೆ ತೋರುತ್ತದೆಯೇ? ಎಂದು ಕೇಳಿದ ತರಗತಿಯ ಎಲ್ಲ ವಿದ್ಯಾರ್ಥಿಗಳು ಒಕ್ಕೊರಳಿನಿಂದ ಹೌದು ಎಂದು ಹೇಳಿದರು.

ಮುಖದಲ್ಲಿ ಮೆಲು ನಗೆಯನ್ನು ಮೂಡಿಸಿದ ಪ್ರೊಫೆಸರ್ ಪುಟ್ಟ ಕಲ್ಲುಗಳನ್ನು ಆ ಜಾಡಿಯಲ್ಲಿ ಹಾಕಲಾರಂಭಿಸಿದ. ದೊಡ್ಡ ಕಲ್ಲುಗಳ ನಡುವಿನ ಸಂದಿಯಲ್ಲಿ ಸಿಲುಕುತ್ತಾ ಜಾರಿ ಪುಟ್ಟ ಕಲ್ಲುಗಳು ಜಾರನ್ನು ತುಂಬಿದವು. ಮತ್ತೆ ವಿದ್ಯಾರ್ಥಿಗಳತ್ತ ತಿರುಗಿದ ಆತ ಈಗ? ಎಂದು ಕೇಳಿದ. ಜೋರಾಗಿ ನಗಾಡುತ್ತಾ ನಿಜ! ಈಗ ಜಾಡಿ ಸಂಪೂರ್ಣ ತುಂಬಿದೆ ಎಂದು ಎಲ್ಲ ವಿದ್ಯಾರ್ಥಿಗಳು ಹೇಳಿದರು

ನಸುನಗುತ್ತಾ ಆತ ಸ್ವಲ್ಪ ಉಸುಕನ್ನು ತೆಗೆದುಕೊಂಡು ಜಾಡಿಯಲ್ಲಿ ಹಾಕಲಾರಂಭಿಸಿದ. ಜಾಡಿಯಲ್ಲಿ ಅಳಿದುಳಿದ ಜಾಗವನ್ನು ಉಸುಕಿನ ಕಣಗಳು ತುಂಬಿಕೊಂಡವು. ಈ ಬಾರಿ ವಿದ್ಯಾರ್ಥಿಗಳೆಡೆ ತಿರುಗಿ ಆತ ನೋಡುವ ಮುನ್ನವೇ ಇದೀಗ ಜಾಡಿ ಸಂಪೂರ್ಣವಾಗಿ ತುಂಬಿದೆ ಎಂದು ಮತ್ತೆ ವಿದ್ಯಾರ್ಥಿಗಳು ಜೋರಾಗಿ ಕೂಗಿ ಹೇಳಿದರು.

ಇದೀಗ ಆತ ಒಂದು ದೊಡ್ಡ ಗ್ಲಾಸ್ ನೀರನ್ನು ತೆಗೆದುಕೊಂಡು ಆ ಜಾಡಿಯಲ್ಲಿ ಸುರಿದ. ಜಾಡಿಯಲ್ಲಿ ನೀರು ಸಂಪೂರ್ಣವಾಗಿ ಸೇರಿಕೊಂಡಿತು. ಇದೀಗ ಆ ಜಾಡಿಯನ್ನು ತೋರಿಸುತ್ತಾ ಪ್ರೊಫೆಸರ್ "ಇದು ನಿಮ್ಮ ಜೀವನ" ಎಂದು ಹೇಳಿದ.

"ಈ ಜಾಡಿ ನಿಮ್ಮ ಜೀವನ ಎಂದು ನಾನು ಹೇಳುವುದಾದರೆ ಇದರಲ್ಲಿ ದೊಡ್ಡ ದೊಡ್ಡ ಕಲ್ಲುಗಳು ನಿಮ್ಮ ಕುಟುಂಬ, ಪ್ರೀತಿ ಪಾತ್ರರು, ಸ್ನೇಹಿತರು, ಆರೋಗ್ಯ ಮತ್ತು ಮನಃಶಾಂತಿಗಳಾಗಿರುತ್ತವೆ.ಉಳಿದ ಎಲ್ಲವೂ ನಿಮ್ಮ ಕೈಯಿಂದ ಜಾರಿ ಹೋದರೂ ಕುಟುಂಬ, ಆರೋಗ್ಯ ಮತ್ತು ಮನಃ ಶಾಂತಿಯೊಂದಿಗೆ ನೀವು ಜೀವನ ಸಾಗಿಸಬಹುದು". ನಂತರ ಹಾಕಿದ ಪುಟ್ಟ ಕಲ್ಲುಗಳು ನಿಮ್ಮ ಕೆಲಸ, ಬದುಕಿನ ಗುರಿ ಮತ್ತು ನಿಮ್ಮ ಸ್ಥಿರತೆಯ ಪ್ರತೀಕ.

ಉಸುಕು ನಿಮ್ಮ ಬದುಕಿನಲ್ಲಿ ಬರುವ ಸಣ್ಣ ಪುಟ್ಟ ಅಡೆತಡೆಗಳು ಗೊಂದಲಗಳು ಮತ್ತು ಅನಿವಾರ್ಯವಾಗಿ ಮಾಡಲೇಬೇಕಾದ ಕೆಲಸಗಳು. ನೋಡಿ, ನಮ್ಮ ಬದುಕೆಂಬ ಜಾಡಿಯಲ್ಲಿ ಸಣ್ಣಪುಟ್ಟ ಅಡೆತಡೆಗಳು ಗೊಂದಲಗಳು ಮತ್ತು ಮಾಡಲೇಬೇಕಾದ ಅನಿವಾರ್ಯದ ಕೆಲಸಗಳನ್ನು ಮೊದಲು ತುಂಬಿ ಬಿಟ್ಟರೆ ಉಳಿದ ಅತ್ಯವಶ್ಯಕವಾದವುಗಳಿಗೆ ಅಲ್ಲಿ ಜಾಗ ಇರುವುದಿಲ್ಲ ಆದ್ದರಿಂದ ಅತ್ಯಂತ ಜಾಗರೂಕತೆಯಿಂದ ನಿಮ್ಮ ಬದುಕಿನಲ್ಲಿ ನಿಮ್ಮ ಕುಟುಂಬ ಸದಸ್ಯರನ್ನು, ಸ್ನೇಹಿತರನ್ನು, ನಿಮ್ಮ ಗುರಿ ಮತ್ತು ಸ್ಥಿರತೆಯನ್ನು ನೀವು ಕಾಯ್ದುಕೊಳ್ಳಲೇಬೇಕು ಎಂದು ಪ್ರೊಫೆಸರರು ಹೇಳಿದರು. ಕೂಡಲೇ ಕೈಯೆತ್ತಿದ ಓರ್ವ ಯುವಕ ಹಾಗಾದರೆ ನಮ್ಮ ಬದುಕಿನಲ್ಲಿ ನೀರಿನ ಪಾತ್ರ ಏನು? ಎಂದು ಕೇಳಿದನು. ಪ್ರೊಫೆಸರ್ ನಸು ನಗುತ್ತಾ ಉತ್ತರಿಸಿದರು. ನಮ್ಮ ಜೀವನ ಎಲ್ಲ ರೀತಿಯ ಸಂತೃಪ್ತತೆಯನ್ನು ಹೊಂದಿದ್ದರೂ ಕೂಡ ಮತ್ತಷ್ಟು ಹೆಚ್ಚು ಸರಳವಾಗಿ ಸಂತಸಪೂರ್ಣವಾಗಿ ಮತ್ತು ಹಗುರವಾಗಿ ಜೀವನವನ್ನು ಜೀವಿಸಲು ನಾವು ನೀರಿನಂತೆ ವರ್ತಿಸಬೇಕು. ಒಂದು ಪುಟ್ಟ ನಗು, ಒಂದು ಸಣ್ಣ ನಡಿಗೆ



ಮತ್ತು ಪ್ರೀತಿ ಪಾತ್ರರೊಂದಿಗೆ ಚಹಾ ಸೇವನೆ ಹೀಗೆ ಎಲ್ಲವೂ ನಮ್ಮ ಬದುಕಿನಲ್ಲಿ ಬೇಕು. ಆದ್ದರಿಂದ ಮೊದಲು ದೊಡ್ಡ ವಸ್ತುಗಳಿಂದ ಆರಂಭಿಸಿ.ಉಳಿದೆಲ್ಲವೂ ತಂತಾನೆ ಸ್ಥಳವನ್ನು ಹೊಂದಿಸಿಕೊಳ್ಳುತ್ತವೆ, ಏನಂತೀರಾ ಎಂದು

ಪ್ರೊಫೆಸರ್ ಕೇಳಿದರು.ಎಲ್ಲ ವಿದ್ಯಾರ್ಥಿಗಳು ಹೌದು ಎನ್ನುವಂತೆ ತಲೆ ಆಡಿಸಿದರು. ನಿಜ ಅಲ್ವೇ ಸ್ನೇಹಿತರೇ! ನಮ್ಮ ಬದುಕು ತುಂಬ ಸರಳ. ಆದರೆ ನಾವೇ ಅದನ್ನು ಇಲ್ಲಸಲ್ಲದ ಮೌಢ್ಯಗಳಿಂದ, ಪೂರ್ವಾಗ್ರಹಗಳಿಂದ ಹಾಳು ಮಾಡಿಕೊಳ್ಳದೆ ಬದುಕನ್ನು ಉನ್ನತ ಮೌಲ್ಯಗಳೊಂದಿಗೆ ಕಟ್ಟಿಕೊಳ್ಳುವ ನಿಟ್ಟಿನಲ್ಲಿ ಪ್ರಯತ್ನ ಪಡೋಣ. ಏನಂತೀರಾ?

**– ವೀಣಾ ಹೇಮಂತ್ ಗೌಡ ಪಾಟೀಲ್ ಮುಂಡರಗಿ ಗದಗ್......**

# ವಿರಾಟ್ ಕೊಹ್ಲಿ ನಿಸ್ವಾರ್ಥ ಆಟಗಾರ : ಫಿಂಚ್

**ನವದೆಹಲಿ, ಮೇ 20–** ತಮ ವೈಯಕ್ತಿಕ ದಾಖಲೆ ನಿರ್ಮಿಸುವ ಹೊಸ್ತಿಲಲ್ಲೆ ವಿರಾಟ್ ಕೊಹ್ಲಿ ಟೆಸ್ಟ್ ಕ್ರಿಕೆಟ್‌ಗೆ ವಿದಾಯ ಹೇಳುವ ಮೂಲಕ ತಾವೊಬ್ಬ ನಿಸ್ವಾರ್ಥ ಆಟಗಾರ ಎಂಬುದನ್ನು ವಿಶ್ವ ಕ್ರಿಕೆಟ್ ಗೆ ತೋರಿಸಿಕೊಟ್ಟಿದ್ದಾರೆ ಎಂದು ಆಸ್ಟ್ರೇಲಿಯಾದ ಮಾಜಿ ನಾಯಕ ಆರೋನ್ ಫಿಂಚ್ ಶ್ಲಾಘಿಸಿದ್ದಾರೆ.

ಭಾರತ ಕ್ರಿಕೆಟ್ ನ ಯಶಸ್ವಿ ನಾಯಕರಾಗಿದ್ದ ವಿರಾಟ್ ಕೊಹ್ಲಿ 68 ರೆಡ್ ಬಾಲ್ ಪಂದ್ಯಗಳಲ್ಲಿ ತಂಡವನ್ನು ಮುನ್ನಡೆಸಿ 40 ಗೆಲುವು, 17 ಸೋಲು ಹಾಗೂ 11 ಡ್ರಾನೊಂದಿಗೆ ಅತಿ ಹೆಚ್ಚು ಟೆಸ್ಟ್ ಗೆಲುವು ಕಂಡ ನಾಯಕ ಎಂಬ ದಾಖಲೆಗೆ ಪಾತ್ರರಾಗಿದ್ದಾರೆ. ಅಲ್ಲದೆ ತವರಿನಲ್ಲಿ 31 ಟೆಸ್ಟ್ ಪಂದ್ಯಗಳಲ್ಲಿ 24ರಲ್ಲಿ ಗೆಲುವು ಸಾಧಿಸಿ ತಮ ಪ್ರಾಬಲ್ಯ ಮೆರೆದಿದ್ದಾರೆ. ವಿದೇಶಿ ನೆಲಗಳಲ್ಲಿ 36 ಪಂದ್ಯಗಳಲ್ಲಿ 16 ಜಯ ಸಾಧಿಸಿ ಸೌರವ್ ಗಂಗೂಲಿ (11) ಅವರ ದಾಖಲೆ ಮುರಿದು ಗಮನ ಸೆಳೆದಿದ್ದಾರೆ. ಅಲ್ಲದೆ ಆಸ್ರೆಲಿಯಾ ( 2018–19)ಹಾಗೂ 2020–21ರಲ್ಲಿ ಇಂಗ್ಲೆಂಡ್ ಹಾಗೂ ದಕ್ಷಿಣ ಆಫ್ರಿಕಾದಲ್ಲಿ ಟೆಸ್ಟ್ ಸರಣಿ ಗೆಲುವು ಸಾಧಿಸಿರುವುದು ಅವರ ಸಾಧನೆಗೆ ಹಿಡಿದ ಕೈಗನ್ನಡಿಯಾಗಿದೆ.

ಆರ್ ಸಿಬಿ ಹಾಗೂ ಕೆಕೆಆರ್ ತಂಡಗಳ ನಡುವಿನ ಪಂದ್ಯದ ವೇಳೆ ವಿರಾಟ್ ಕೊಹ್ಲಿ ಅವರ ಟೆಸ್ಟ್ ನಿವೃತ್ತಿ ಕುರಿತು ಆರೋನ್ ಫಿಂಚ್ ತಮ ಅನಿಸಿಕೆ ಹಂಚಿಕೊಂಡಿದ್ದಾರೆ. 'ಕಳೆದ ಐದು ವರ್ಷಗಳಿಂದ ಗಮನಿಸಿದರೆ ವಿರಾಟ್ ಕೊಹ್ಲಿ ಅವರ ಬ್ಯಾಟಿಂಗ್ ವೈಭವ ಕೊಂಚ ಕಳೆದುಕೊಂಡಂತೆ ಕಾಣುತ್ತದೆ. ಆದರೆ ಸವಾಲನ್ನು



ಮೆಟ್ಟಿ ನಿಲ್ಲುವಲ್ಲಿ ನಿಸ್ಸಿಮರಾಗಿರುವ ವಿರಾಟ್ ಕೊಹ್ಲಿ ಅವರು ತಮಗೆ ಸವಾಲಾಗಿದ್ದ ಸ್ಪಿನ್ ಬೌಲಿಂಗ್ ಅನ್ನು ಎದುರಿಸುವುದನ್ನು ಇತ್ತಿ?ಚೆಗೆ ಕರಗತ ಮಾಡಿಕೊಂಡು ಅದನ್ನು ಮೈದಾನದಲ್ಲಿ ಪ್ರದರ್ಶಿಸಿದ್ದರು' ಎಂದು ಫಿಂಚ್ ಶ್ಲಾಘಿಸಿದ್ದಾರೆ.

'ಟೆಸ್ಟ್ ಕ್ರಿಕೆಟ್ ನಲ್ಲಿ ಎದುರಾಳಿ ತಂಡವನ್ನು ಮಣಿಸಲು ನಮ ತಂಡಕ್ಕೆ ಏನು ಮುಖ್ಯ ಆಗುತ್ತದೆ ಎಂಬುದನ್ನು ತುಂಬಾ ಚೆನ್ನಾಗಿ ಅರಿತಿರುವ ವಿರಾಟ್ ಕೊಹ್ಲಿ ಅವರು, ತಮ ವೈಯಕ್ತಿಕ ದಾಖಲೆಗಳನ್ನು ನಿರ್ಮಿಸುವತ್ತ ಗಮನಹರಿಸದೆ, ಭಾರತ ತಂಡದ ಮುಂದಿನ ಟೆಸ್ಟ್ ಭವಿಷ್ಯದ ದೃಷ್ಟಿಯಿಂದ ನಿವೃತ್ತಿ ಘೋಷಿಸಿದ್ದು ಅವರ ನಿರ್ಧಾರ ಸ್ವಾಗತಾರ್ಹ' ಎಂದು ಹೇಳಿದರು.

## 4ನೇ ಗರಿಷ್ಠ ಸ್ಕೋರರ್:

**ವಿಶ್ವ ಕ್ರಿಕೆಟ್‌ನ ನಾಲ್ವರು ದಿಗ್ಗಜರ ಪೈಕಿ ಒಬ್ಬರಾಗಿ ಗುರುತಿಸಿಕೊಂಡಿರುವ ವಿರಾಟ್ ಕೊಹ್ಲಿಅವರು, ಭಾರತ ಟೆಸ್ಟ್ ಕ್ರಿಕೆಟ್ ನಲ್ಲಿ ಸಚಿನ್ ತೆಂಡೂಲ್ಕರ್ (15,921), ರಾಹುಲ್ ದ್ರಾವಿಡ್ (13,265) ಹಾಗೂ ಸುನೀಲ್ ಗವಾಸ್ಕರ್ (10,122) ನಂತರ ಅತಿ ಹೆಚ್ಚು ರನ್ ಗಳಿಸಿದ ಆಟಗಾರನಾಗಿ ವಿರಾಟ್ ಕೊಹ್ಲಿ (9230) ಗುರುತಿಸಿಕೊಂಡಿದ್ದಾರೆ.**

# ಆಸ್ಟ್ರೇಲಿಯಾ ಕ್ರಿಕೆಟಿಗ ಟ್ರಾವಿಸ್ ಹೆಡ್‌ಗೆ ಕೋವಿಡ್ –19 ದೃಢ

**ಪರ್ತ್,ಮೇ.20–**ಆಸ್ಟ್ರೇಲಿಯಾ ಕ್ರಿಕೆಟ್ ತಂಡದ ಆಟಗಾರ ಟ್ರಾವಿಸ್ ಹೆಡ್‌ಗೆ ಕೋವಿಡ್ –19 ಸೋಂಕು ದೃಢಪಟ್ಟಿದೆ. ಐಪಿಎಲ್‌ನಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡದ ಆಟಗಾರರಾಗಿದ್ದ ಟ್ರಾವಿಸ್ ಹೆಡ್ ಕೋವಿಡ್‌ನಿಂದಾಗಿ ಆಸ್ಟ್ರೇಲಿಯಾದಲ್ಲೇ ಉಳಿದಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ.

ಪ್ರಸ್ತುತ ಐಪಿಎಲ್‌ನಲ್ಲಿ ಆಡುವುದು ಅನುಮಾನವಾಗಿದೆ. ಈಗಾಗಲೆ ಸನ್ ರೈಸರ್ಸ್ ತಂಡ ಪ್ಲೇಆಫ್‌ನಿಂದ ಹೊರಬಿದ್ದಿದೆ. ಇಂದು ಮೇ 19ರಂ ದು ಲಕ್ನೆ ಸೂಪರ್ ಜೈಂಟ್ಸ್ ವಿರುದ್ಧ ನಡೆಯುವ ಪಂದ್ಯ ದಿಂದ ಅವರು ಹೊರಗುಳಿ ಯಲಿದ್ದಾರೆ ಎಂದು ತಂಡದ ಕೋಚ್ ಡೇನಿಯಲ್ ವೆಟ್ಟೋರಿ ಅಧಿಕೃತ ಮಾಹಿತಿ ನೀಡಿ ದ್ದಾರೆ.



ಸದ್ಯ ಅವರು ಆಸ್ಟ್ರೇಲಿಯಾದಲ್ಲಿದ್ದು, ಚಿಕಿತ್ಸೆ ನಂತರ ಭಾರತಕ್ಕೆ ಆಗಮಿಸಲಿದ್ದಾರೆ. ಅವರ ಆರೋಗ್ಯದ ಸ್ಥಿತಿ ನೋಡಿ ಉಳಿದ ಎರಡು ಪಂದ್ಯಗಳಿಗೆ ಅವರು ಲಭ್ಯರಿರುತ್ತಾರೆಯೇ ಎಂಬುದನ್ನು ನಿರ್ಧರಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

ಸನ್‌ರೈಸರ್ಸ್ ಹೈದರಾಬಾದ್ ತಂಡ ಪ್ರಸ್ತುತ ಅಂಕಪಟ್ಟಿಯಲ್ಲಿ 8ನೇ ಸ್ಥಾನದಲ್ಲಿದೆ. ಒಂದು ಪಂದ್ಯದಲ್ಲಿ ರಾಯಲ್ ಚಾಲೆಂಜಸ್ 9 ಬೆಂಗಳೂರು (ಮೇ 23) ಮತ್ತೊಂದರಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ (ಮೇ 25) ತಂಡವನ್ನು ಎದುರಿಸಲಿದೆ.

# ಲಷ್ಕರ್ ಉಗ್ರ ಸೈಫುಲ್ಲಾ ಪಾಕಿಸ್ತಾನದಲ್ಲಿ 'ಅಪರಿಚಿತ'ರಿಂದ ಹತ್ಯೆ..!



**ನವದೆಹಲಿ,ಮೇ.20–** 2006 ರಲ್ಲಿ ಆರ್‌ಎಸ್‌ಎಸ್ ಪ್ರಧಾನ ಕಚೇರಿಯ ಮೇಲೆ ನಡೆದ ದಾಳಿಯ ಹಿಂದಿನ ಮಾಸ್ಟರ್ ಮೈಂಡ್ ಲಷ್ಕರ್–ಎ–ತೊಯ್ಬಾ ಭಯೋತ್ಪಾದಕ ರಜವುಲ್ಲಾ ನಿಜಾಮಿ ಅಲಿಯಾಸ್ ಅಬು ಸೈಯುಲ್ಲಾನನ್ನು ಪಾಕಿಸ್ತಾನದ ಸಿಂದ್ ಪ್ರಾಂತ್ಯದಲ್ಲಿ ಅಪರಿಚಿತ ಬಂದೂಕುಧಾರಿಗಳು ಗುಂಡಿಕ್ಕಿ ಭಾನುವಾರ ಹತ್ಯೆ ಮಾಡಿದ್ದಾರೆ. ಲಷ್ಕರ್ ಭಯೋತ್ಪಾದಕ ಅಬು ಸೈಫುಲ್ಲಾ ನೇಪಾಳದ ಮೂಲಕ ಭಯೋತ್ಪಾದಕ ಜಾಲವನ್ನು ನಿರ್ವಹಿಸುತ್ತಿದ್ದ.

ಲಷ್ಕರ್ ಉಗ್ರ ರಜಾವುಲ್ಲಾ ನಿಝಾಮನಿ ಭಾರತದಲ್ಲಿ ಮೂರು ಉಗ್ರ ದಾಳಿ ನಡೆಸಿದ್ದ. ಇದರ ಜೊತೆಗೆ ಹಲವು ದಾಳಿಗೆ ನೆರವು ನೀಡಿದ್ದ. 2006ರಲ್ಲಿ ನಾಗ್ಪುರದ ಆರ್‌ಎಸ್‌ಎಸ್ ಮುಖ್ಯ ಕಚೇರಿ ಮೇಲೆ ನಡೆಸಿದ ಉಗ್ರ ದಾಳಿ, 2005 ರಲ್ಲಿ ಬೆಂಗಳೂರಿನ ಇಂಡಿಯನ್ ಇನ್ಸಿಟ್ಯೂಟ್ ಆಫ್ ಸೈನ್ಸ್ ಮೇಲೆ ನಡೆಸಿದ ಉಗ್ರ ದಾಳಿ ಹಾಗೂ 2001 ರಲ್ಲಿ ರಾಂಪುರದ ಸಿಆರ್‌ಪಿಎ ಫ್ ಮೇಲೆ ನಡೆಸಿದ ಉಗ್ರ ದಾಳಿ ಮಾಸ್ಟರ್ ಮೈಂಡ್ ಈತ. ಭಾರತಕ್ಕೆ ಬೇಕಾಗಿದ್ದ ಈ ಉಗ್ರನನ್ನು ಸಿಂಧ್ ಪ್ರಾಂತ್ಯದಲ್ಲಿ ಅಪರಿಚಿತರು ಹತ್ಯೆ ಮಾಡಿ ದ್ದಾರೆ.

ವಿನೋದ್ ಕುಮಾರ್, ಮೊಹ ಮ್ಮದ್ ಸಲೀಂ, ಖಾಲಿದ್, ವನಿಯಾಲ್, ವಾಜಿದ್ ಮತ್ತು ಸಲೀಂ ಭಾಯ್ ಸೇರಿದಂತೆ ಬಹುಅಲಿಯಾಸ್‌ಗಳಿಂದ ಕರೆಯಲ್ಪಡುವ ಸೈಫುಲ್ಲಾ, ಎಲ್‌ಇಟಿಯ ಕಾರ್ಯಾಚರಣೆಗಳು, ನೇಮಕಾತಿ, ನಿಧಿಸಂಗ್ರ ಹಣೆ ಮತ್ತು ಗಡಿಯಾಚೆಗಿನ ಒಳನುಸುಳುವಿಕೆಯಲ್ಲಿ ಪ್ರಮು ಖ ವ್ಯಕ್ತಿಯಾಗಿದ್ದ.

ಲಷ್ಕರ್–ಎ–ತೊಯ್ಬಾದ ಉನ್ನತ ಕಮಾಂಡರ್ ಅಬು ಸೈಫುಲ್ಲಾ ಭಾರತದಲ್ಲಿ ಭಯೋತ್ಪಾದಕ ದಾಳಿಗಳನ್ನು ನಡೆಸುತ್ತಿದ್ದ. ಅಬು ಸೈಫುಲ್ಲಾ ಅಲಿಯಾಸ್ ಮೊಹಮ್ಮದ್ ಸಲೀಂ ನೇಪಾಳದಲ್ಲಿ ತನ್ನ ಭಯೋತ್ಪಾದಕ ಜಾಲವನ್ನು ಹರಡಿದ್ದ ಮತ್ತು ಅಲ್ಲಿಂದ ಭಾರತದ ವಿರುದ್ಧ ಭಯೋತ್ಪಾದಕ ಪಿತೂರಿಗಳನ್ನು ನಡೆಸುತ್ತಿದ್ದ. ಭಾರತದ ಭದ್ರತಾ ಸಂಸ್ಥೆಗಳು ಅಬು ಸೈಫುಲ್ಲಾನನ್ನು ಮೋಸ್ಟ್ ವಾಂಟೆಡ್ ಭಯೋತ್ಪಾದಕರ ಪಟ್ಟಿಯಲ್ಲಿ ಸೇರಿಸಿದ್ದವು. ಇದರಿಂದಾಗಿ ಆತ ನೇಪಾಳ ಬಿಟ್ಟು ಪಾಕಿಸ್ತಾನಕ್ಕೆ ಪಲಾಯನ ಮಾಡಿದ್ದ. ಅವರು ಪಾಕಿಸ್ತಾನದಲ್ಲಿ ವಾಸಿಸುತ್ತಿದ್ದಾಗ ಅಪರಿಚಿತ ದಾಳಿಕೋರರಿಂದ ಹತ್ಯೆಗೀಡಾಗಿದ್ದಾನೆ ಎಂದು ವರದಿಯಾಗಿದೆ.

# ಏಷ್ಯಾ ಕಪ್ ಕ್ರಿಕೆಟ್ ಟೂರ್ನಿಯಿಂದ ಹಿಂದೆ ಸರಿದ ಭಾರತ




**ನವದೆಹಲಿ,ಮೇ.20–** ಪಾಕಿ ಸ್ತಾನಕ್ಕೆ ಭಾರತ ಮತ್ತೊಂದು ತೀವ್ರ ಹೊಡೆತ ನೀಡಿದೆ. ಮುಂಬರುವ ಏಷ್ಯಾಕಪ್‌ಗೆ ಸಂಬಂಧಿಸಿದಂತೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಒಂದು ಮಹತ್ವದ ನಿರ್ಧಾರ ಕೈಗೊಂಡಿದೆ. ಭಾರತ ಏಷ್ಯಾ ಕಪ್ 2025 ರಿಂದ ಹಿಂದೆ ಸರಿದಿದೆ. ಭಾರತ ತಂಡ ಪುರುಷರ ಏಷ್ಯಾ ಕಪ್ 2025 ಮತ್ತು ಮಹಿಳಾ ಉದಯೋನ್ಮುಖ ತಂಡ ಏಷ್ಯಾ ಕಪ್‌ನಲ್ಲಿ ಭಾಗವಹಿಸುವುದಿಲ್ಲ ಎಂದು ಬಿಸಿಸಿಐ ಏಷ್ಯನ್ ಕ್ರಿಕೆಟ್ ಕೌನ್ಸಿ ಲ್(ಎಸಿಸಿ)ಗೆ ತಿಳಿಸಿದೆ.ಜೂನ್‌ನಲ್ಲಿ ಶ್ರೀಲಂಕಾದಲ್ಲಿ ಈ ಪಂದ್ಯಗಳು ನಡೆಯಲಿವೆ.

ಪಾಕಿಸ್ತಾನ ಸಚಿವ ಮೊಹ್ಸಿನ್ ನಖ್ವಿ ನೇತೃತ್ವದ ಏಷ್ಯನ್ ಕ್ರಿಕೆಟ್ ಕೌನ್ಸಿಲ್ (ಎಸಿಸಿ) ಗೆ ಬಿಸಿಸಿಐ, ಜೂನ್‌ನಲ್ಲಿ ಶ್ರೀಲಂಕಾದಲ್ಲಿ ನಡೆಯಲಿರುವ ಮಹಿಳಾ ಉದಯೋನ್ಮುಖ ತಂಡಗಳ ಏಷ್ಯಾ ಕಪ್ ಮತ್ತು ಪುರುಷರ ಏಷ್ಯಾ ಕಪ್ 2025 ರಿಂದ ತನ್ನ ತಂಡಗಳನ್ನು ಹಿಂತೆಗೆದು ಕೊಳ್ಳುತ್ತಿದೆ ಎಂದು ತಿಳಿಸಿದೆ. ಭಾರತ ಮತ್ತು ಪಾಕಿಸ್ತಾನ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ವರದಿ ತಿಳಿಸಿದೆ. ಕಳೆದ ತಿಂಗಳು, ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಭಾರತವು ಆಪರೇಷನ್ ಸಿಂಧೂರ್ ಮೂಲಕ ಪಾಕಿಸ್ತಾ ನಕ್ಕೆ ಸೂಕ್ತ ಪ್ರತ್ಯುತ್ತರ ನೀಡಿದೆ.

ಪಾಕಿಸ್ತಾನಿ ಸಚಿವರು ನೇತೃತ್ವದ ಮತ್ತು ಎಸಿಸಿ ಆಯೋಜಿಸುವ ಪಂದ್ಯಾವಳಿಯಲ್ಲಿ ಭಾರತ ತಂಡ ಆಡಲು ಸಾಧ್ಯವಿಲ್ಲ ಎಂದು ಬಿಸಿಸಿಐ ಮೂಲ ವೊಂದು ಹೇಳಿರುವುದಾಗಿ ವರದಿ ತಿಳಿಸಿದೆ.ಇದು ದೇಶದ ಭಾವನೆ. ಮುಂಬರುವ ಮಹಿಳಾ ಉದಯೋನ್ಮುಖ ತಂಡ ಗಳ ಏಷ್ಯಾ ಕಪ್‌ನಿಂದ ಹಿಂದೆ ಸರಿಯುವ ಬಗ್ಗೆ ಎಸಿಸಿಗೆ ಮೌಖಿಕವಾಗಿ ತಿಳಿಸಲಾಗಿದೆ.

# ಮದುವೆಯ ವದಂತಿಗೆ ವಿಜಯ್ ತೆರೆ

**ಹೈದರಾಬಾದ್,ಮೇ.20–** ದಕ್ಷಿಣ ಭಾರತದ ನಟ ವಿಜಯ್ ದೇವರಕೊಂಡ ಮತ್ತು ನಟಿ ರಶ್ಮಿಕಾ ಮಂದಣ್ಣ ಡೇಟಿಂಗ್ ವದಂತಿಗಳಿಂದಾಗಿ ಆಗಾಗ್ಗೆ ಸುದ್ದಿಯಲ್ಲಿರುತ್ತಾರೆ . ಈ ಜೋಡಿ ಒಟ್ಟಿಗೆ ಕಾಣಿಸಿಕೊಂಡಾಗಲೆಲ್ಲಾ, ಅವರ ಸಂಬಂಧದ ವದಂತಿಗಳು ಕಾಡ್ಗಿಚ್ಚಿನಂತೆ ಹರಡುತ್ತಿದ್ದವು. ಈ ವಿಷಯದಲ್ಲಿ ರಶ್ಮಿಕಾ ಮತ್ತು ವಿಜಯ್ ಎಂದಿಗೂ ಯಾವುದೇ ಸ್ಪಷ್ಟೀಕರಣವನ್ನು ನೀಡದಿದ್ದರೂ, ಈಗ ವಿಜಯ್ ಅವರ ನಿಶ್ಚಿತಾರ್ಥದ ವಿಷಯ ಬೆಳಕಿಗೆ ಬಂದಾಗ, ನಟ ಈ ಬಗ್ಗೆ ಮೌನ ಮುರಿದಿದ್ದಾರೆ. ಅವರ ಇತ್ತೀ ಚಿನ ಸಂದರ್ಶನದಲ್ಲಿ, ಅವರು ಮದುವೆಯ ಬಗ್ಗೆ ತಮ್ಮ ಅಭಿಪ್ರಾಯವನ್ನು ಹೇಳಿದ್ದಾರೆ.

ಇತ್ತೀಚಿನ ಮಾತುಕತೆಯಲ್ಲಿ, ವಿಜಯ್ ದೇವರಕೊಂಡ ಅವರನ್ನು ರಶ್ಮಿಕಾ ಅವರೊಂದಿಗಿನ ಸಂಬಂಧದ ಬಗ್ಗೆ ಪ್ರಶ್ನಿಸಿದಾಗ, ನಟ ಅದನ್ನು ನಿರ್ಲಕ್ಷಿಸಿದ್ದಾರೆ. ನೀವು ಉದ್ಯಮದ ಬಗ್ಗೆ ಪ್ರಶ್ನೆ ಕೇಳಬೇಕು ಎಂದು ನಟ



ಉತ್ತರಿಸಿದ್ದಾರೆ. ರಶ್ಮಿಕಾ ಮಂದಣ್ಣ ಮತ್ತು ಅವರ ಸಂಬಂಧದ ಬಗ್ಗೆ, ನಟ ತುಂಬಾ ಗೊಂದಲಮಯ ಉತ್ತರವನ್ನು ನೀಡಿದ್ದಾರೆ .ನಾನು ಈಗ ಮದುವೆಯಾಗುತ್ತಿಲ್ಲ ಎಂದು ಹೇಳಿದ್ದಾರೆ. ಹೌದು, ನಾನು ಮದುವೆಯಾಗುತ್ತೇನೆ, ಆದರೆ ನನಗೆ ಒಳ್ಳೆಯ ಜೀವನ ಸಂಗಾತಿ ಸಿಕ್ಕಾಗ ಮಾತ್ರ. ರಶ್ಮಿಕಾ ಮಂದಣ್ಣ ಅವರನ್ನು ಹೊಗಳಿದ ಅವರು, ಅವರು ಒಬ್ಬ ಮಹಾನ್ ತಾರೆ ಮತ್ತು ತುಂಬಾ ಶ್ರಮಜೀವಿ ಎಂದು ಬಣ್ಣಿಸಿದ್ದಾರೆ.

ರಶ್ಮಿಕಾ ತಮ್ಮ ಸಂಗಾತಿಯ ಪಟ್ಟಿಯಲ್ಲಿ ಹೊಂದಿಕೊಳ್ಳುತ್ತಾರೆಯೇ ಎಂಬ ಪ್ರಶ್ನೆಗೆ ಕೇಳಿದಾಗ, ನಟ, ಒಳ್ಳೆಯ ಹೃದಯ ಹೊಂದಿರುವ ಯಾವುದೇ ಒಳ್ಳೆಯ ಮಹಿಳೆ ಇದರಲ್ಲಿ ಹೊಂದಿಕೊಳ್ಳುತ್ತಾರೆ ಎಂದು ಉತ್ತರಿಸಿದ್ದಾರೆ. ವಿಜಯ್ ರಶ್ಮಿಕಾ ಅವರೊಂದಿಗೆ ಕೆಲಸ ಮಾಡುವ ಬಗ್ಗೆ ಮಾತನಾಡಿದ್ದಾರೆ .ಕೆಲವು ಸಮಯದ ಹಿಂದೆ ವಿಜಯ್ ದೇವರಕೊಂಡ ಫೆಬ್ರವರಿಯಲ್ಲಿ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ ಎಂಬ ವದಂತಿಗಳು ಪ್ರತಿಕ್ರಿಯಿಸಿದ ವಿಜಯ್, ಅಂತಹದ್ದೇನೂ ಇಲ್ಲ ಎಂದು ಸ್ಪಷ್ಟವಾಗಿ ನಿರಾಕರಿಸಿದ್ದಾರೆ. ಮಾಧ್ಯಮಗಳು ಪ್ರತಿ ಎರಡು ವರ್ಷಗಳಿಗೊಮ್ಮೆ ನನ್ನ ಮದುವೆಯನ್ನು ಪ್ರಕಟಿಸುತ್ತವೆ ಎಂದು ವ್ಯಂಗ್ಯವಾಡಿದ್ದಾರೆ.

# ಈಡಿಸ್ ಲಾರ್ವಾ ನಿಯಂತ್ರಣ ಕ್ರಮಗಳ ಪಾಲಿಸದಿದ್ದರೆ ದಂಡ: ಡಾ.ಚಂದ್ರಶೇಖರಯ್ಯ

**ಯುವ ಮಾರ್ಗ ಸುದ್ದಿ**

**ರಾಯಚೂರು ಮೇ.20–** ಜಿಲ್ಲಾ ಆರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಾರ್ಯಾಲಯದಿಂದ ಈಡಿಸ್ ಲಾರ್ವಾ ನಿಯಂತ್ರಣ ಕ್ರಮಗಳನ್ನು ಪಾಲಿಸದೆ ವೈಯಕ್ತಿಕವಾಗಿ ಮತ್ತು ಸಾರ್ವಜನಿಕವಾಗಿ ಆರೋಗ್ಯಕ್ಕೆ ಧಕ್ಕೆ ಉಂಟುಮಾಡುವವರಿಗೆ ನಿರ್ದಿಷ್ಟ ಮೊತ್ತದ ದಂಡವನ್ನು ವಿಧಿಸಲಾಗುತ್ತದೆ ಎಂದು ಜಿಲ್ಲಾ ಆರೋಗ್ಯವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಾದ ಡಾ.ಚಂದ್ರಶೇಖರಯ್ಯ ಅವರು ತಿಳಿಸಿದ್ದಾರೆ.

ರಾಜ್ಯದಲ್ಲಿ ಹೆಚ್ಚಾಗುತ್ತಿರುವ ವಿಬಿಡಿ ಪ್ರಕರಣಗಳು ಮತ್ತು ಸೊಳ್ಳೆ ಉತ್ಪತ್ತಿ ತಾಣಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ದೃಷ್ಟಿಯಿಂದ ಡೆಂಗಿ ಜ್ವರವನ್ನು ಸಾಂಕ್ರಾಮಿಕ ರೋಗ ಎಂದು ಅಧಿಸೂಚಿಸಲಾಗಿದೆ.

ಈಡಿಸ್ ಲಾರ್ವಾ ಉತ್ಪತ್ತಿ ತಾಣಗಳನ್ನು ನಿಯಂತ್ರಿಸಲು ಪ್ರತಿ ಶುಕ್ರವಾರ ಈಡಿಸ್ ಲಾರ್ವಾ ನಿರ್ಮೂಲನಾ ದಿನ ಎಂದು ಆಚರಿಸಲು ಎಲ್ಲಾ ಕಾರ್ಯಗಳು ಸಮರೋಪಾದಿಯಲ್ಲಿ ಕೈಗೊಳ್ಳಲಾಗುತ್ತಿದೆ. ಆದುದರಿಂದ ಈಡಿಸ್ ಲಾರ್ವಾ ನಿಯಂತ್ರಣ ಕ್ರಮಗಳನ್ನು ಪಾಲಿಸದೆ ವೈಯಕ್ತಿಕವಾಗಿ ಮತ್ತು ಸಾರ್ವಜನಿಕವಾಗಿ ಆರೋಗ್ಯಕ್ಕೆ ಧಕ್ಕೆ ಉಂಟುಮಾಡುವವರಿಗೆ ನಿರ್ದಿಷ್ಟ ಮೊತ್ತದ ದಂಡವನ್ನು ವಿಧಿಸಲು ಅವಕಾಶವನ್ನು ಕಲ್ಪಿಸಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಆರೋಗ್ಯ ಇಲಾಖೆಯ ವತಿಯಿಂದ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಲಾರ್ವಾ ಸಮೀಕ್ಷೆ ಕೈಗೊಂಡಾಗ ಮನೆಯ ಹೊರಗೆ ಮತ್ತು ಒಳಗೆ, ಎಲ್ಲಾ ಸರ್ಕಾರಿ ಮತ್ತು ಖಾಸಗಿ ಮಟ್ಟದ ವಾಣಿಜ್ಯ ಮಳಿಗೆಗಳು, ಕಚೇರಿಗಳು, ಶಾಲೆ ಹಾಗೂ ಕಾಲೇಜು, ವಸತಿ ನಿಲಯಗಳು, ಹೋಟೆಲ್, ಲಾಡ್ಜ್‌ಗಳು ಸೇರಿದಂತೆ ನಿರ್ಮಾಣ ಹಂತದಲ್ಲಿರುವ ಮಳಿಗೆಗಳಲ್ಲಿ ಈಡಿಸ್ ಲಾರ್ವಾಗಳು ಕಂಡುಬಂದಲ್ಲಿ ಈಡಿಸ್ ಲಾರ್ವಾಗಳು ನಿಯಂತ್ರಣ ಕ್ರಮಗಳನ್ನು ಪಾಲಿಸದೆ ವೈಯಕ್ತಿಕವಾಗಿ ಮತ್ತು ಸಾರ್ವಜನಿಕವಾಗಿ ಆರೋಗ್ಯಕ್ಕೆ ಧಕ್ಕೆ ಉಂಟುಮಾಡುವವರಿಗೆ ನಿರ್ದಿಷ್ಟ ಮೊತ್ತದ ದಂಡವನ್ನು ವಿಧಿಸಲಾಗುತ್ತದೆ.

ಮನೆಗಳು (ಒಳಾಂಗಣ ಮತ್ತು ಹೊರಾಂಗಣ ಎರಡೂ) ನಗರ ಪ್ರದೇಶದಲ್ಲಿ 800 ರೂ. ಹಾಗೂ ಗ್ರಾಮೀಣ ಪ್ರದೇಶದಲ್ಲಿ 400 ರೂ., ವಾಣಿಜ್ಯ ಮಳಿಗೆಗಳು, ಸಂಸ್ಥೆಗಳು, ಕಚೇರಿಗಳು, ಶಾಲೆಗಳು ಮತ್ತು ಕಾಲೇಜುಗಳು, ವಸತಿ ನಿಲಯ ಅಥವಾ ಪ್ರಕಾರಗಳು, ಆರೋಗ್ಯ ಸೌಲಭ್ಯಗಳು, ರೆಸ್ಟೋರೆಂಟ್‌ಗಳು, ಹೋಟೆಲ್‌ಗಳು, ಲಾಡ್ಜ್‌ಗಳು, ರೆಸಾರ್ಟ್‌ಗಳು, ಹೋಂಸ್ಟೇಗಳು, ಮನೋರಂಜನಾ ಉದ್ಯಾನವನಗಳು, ಮಾಲ್‌ಗಳು, ಸೂಪರ್ ಮಾರುಕಟ್ಟೆಗಳು, ಸಣ್ಣ ಅಂಗಡಿಗಳು, ತೆಂಗಿನಕಾಯಿ ಮಾರಾಟಗಾರರು, ಕಾರ್ಖಾನೆಗಳು, ಕೈಗಾರಿಕೆಗಳು, ಪಂಕ್ಚರ್ ದುರಸ್ತಿ ಅಂಗಡಿಗಳು, ಘನತ್ಯಾಜ್ಯ ಸಂಗ್ರಹಣಾ ಅಂಗಡಿಗಳು, ಸಸ್ಯ ನರ್ಸರಿ, ಸಿನಿಮಾ ಥಿಯೇಟರ್, ಸಮಾವೇಶ ಸಭಾಂಗಣಗಳು ಸೇರಿದಂತೆ ಸ್ಥಳಗಳಿಗೆ ನಗರ ಪ್ರದೇಶಗಳಿಗೆ 2 ಸಾವಿರ ಹಾಗೂ ಗ್ರಾಮೀಣ ಪ್ರದೇಶದಲ್ಲಿ 1 ಸಾವಿರ ರೂ.ಗಳು., ಸಕ್ರಿಯವಾಗಿ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳು, ಕೈಬಿಟ್ಟ ನಿರ್ಮಾಣ ಸ್ಥಳಗಳು ಮತ್ತು ಖಾಲಿ ಸ್ಥಳಗಳು ಅಥವಾ ತೆರೆದ ಭೂಮಿಗಳಿಗೆ ನಗರ ಪ್ರದೇಶಗಳಿಗೆ 4 ಸಾವಿರ ಹಾಗೂ ಗ್ರಾಮೀಣ ಪ್ರದೇಶದಲ್ಲಿ 2 ಸಾವಿರ ರೂ.ಗಳನ್ನು ಸಾರ್ವಜನಿಕವಾಗಿ ಆರೋಗ್ಯಕ್ಕೆ ಧಕ್ಕೆ ಉಂಟುಮಾಡುವವರಿಗೆ ದಂಡ ವಿಧಿಸಲಾಗುತ್ತದೆ ಎಂದು ಜಿಲ್ಲಾ ಆರೋಗವಾಹಕ ಆಶ್ರಿತ ರೋಗಗಳ ನಿಯಂತ್ರ ಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಳ ಮೀಸಲು: ಸಮೀಕ್ಷಾ ಅವಧಿ ವಿಸ್ತರಣೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಮೇ.20–** ಕರ್ನಾಟಕ ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿರುವ 101 ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು ಎಂಪಿರಿಕಲ್ ಡಾಟಾ (Empirical Data) ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ (ಉಪ ವರ್ಗೀಕರಣ) ಕುರಿತಾಗಿ ವರದಿ ಸಲ್ಲಿಸಲು ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಡಾ. ಹೆಚ್.ಎನ್. ನಾಗಮೋಹನ್ ದಾಸ್ ಅವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ರಚಿಸಲಾಗಿರುತ್ತದೆ.

ದಿನಾಂಕ 27-03-2025ರಂದು ಈ ಆಯೋಗವು ಸಲ್ಲಿಸಿದ ಮಧ್ಯಂತರ ವರದಿಯ ಆಧಾರದ ಮೇರೆಗೆ ವೈಜ್ಞಾನಿಕವಾದ ದತ್ತಾಂಶವನ್ನು (Empirical Data) ಸಂಗ್ರಹಿಸಲು 2025ರ ಮೇ 05 ರಿಂದ ಕರ್ನಾಟಕ ಸರ್ಕಾರದಿಂದ ನಡೆಸಲಾಗುತ್ತಿರುವ ಸಮೀಕ್ಷಾ ಅವಧಿಯನ್ನು ವಿಸ್ತರಿಸಲಾಗಿದೆ.

ಮನೆ ಮನೆ ಭೇಟಿ ನೀಡಿ ನಡೆಸುವ ಸಮೀಕ್ಷೆ ದಿನಾಂಕನ್ನು ಮೇ 25ರವರೆಗೆ ವಿಸ್ತರಿಸಲಾಗಿದೆ. ವಿಶೇಳ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) 3 ದಿನಗಳ ಕಾಲ ದಿನಾಂಕನ್ನು ಮೇ 26 ರಿಂದ ಮೇ 28ರವರೆಗೆ ಮರು ನಗದಿಪಡಿಸಲಾಗಿದೆ. ಆನ್‌ಲೈನ್ ಮೂಲಕ ಸ್ವಯಂ ಘೋಳಣೆಯನ್ನು ಮೇ 19 ರಿಂದ ಮೇ



28ರವರೆಗೆ ನಗದಿಪಡಿಸಲಾಗಿದೆ. ಆದಕಾರಣ ಸಾರ್ವಜನಕರು ಈ ಸಮೀಕ್ಷಾ ಅಭಿಯಾನದಲ್ಲಿ ಭಾಗವಹಿಸಿ, ಸಮೀಕ್ಷೆಗೆ ಸಹಕರಿಸಲು ಮತ್ತು ಗಣತಿದಾರರಿಗೆ ಅಗತ್ಯ ಮಾಹಿತಿ ನೀಡಲು ಕೋರಿದೆ ಎಂದು ಜಿಲ್ಲಾಧಿಕಾರಿಗಳಾದ ನತೀಶ್ ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶೈಕ್ಷಣಿಕ ಪ್ರಗತಿಗೆ ಕಾಯಂ ಶಿಕ್ಷಕರ ನೇಮಕವಾಗಲಿ

**ಯುವ ಮಾರ್ಗ ಸುದ್ದಿ**

**ಅರಕೇರಾ,ಮೇ.20–** ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಗುಣಮಟ್ಟ ಸುಧಾರಣೆಗಾಗಿ ಶಿಕ್ಷಕರ ಬಡ್ತಿ ಹಾಗೂ ನೇಮಕ ಮತ್ತು ಹೊಸ ಕಂದಾಯ ತಾಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಆರಂಭಿಸುವಂತೆ ಡಿಸಾ ಮಾಜಿ ಸದಸ್ಯ ಹನುಮಂತ್ರಾಯ ನಾಯಕ ಆಕಳಕುಂಪಿ ಆಗ್ರಹಿಸಿದರು.

ಪಟ್ಟಣದಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿ ಮಾತನಾಡಿದ ಅವರು, ರಾಯ ಚೂರು, ಯಾದಗಿರಿ ಸೇರಿ ಕೆಕೆ ಭಾಗದ ಶೈಕ್ಷಣಿಕ ಗುಣಮಟ್ಟ ಕುಸಿಯಲು ಹಲವಾರು ಕಾರಣಗಳಲ್ಲಿ ಪ್ರಮುಖವಾಗಿ ಶಿಕ್ಷಕರ ಕೊರತೆಯೂ ಒಂದು. ಕೆಕೆ ಭಾಗದ ಸರ್ಕಾರಿ ಪ್ರೌಢ ಶಾಲೆಗಳಿಗೆ ಮಂಜೂರು ಆಗಿರುವ 11,793 ಹುದ್ದೆಗಳಲ್ಲಿ 4,107 ಹುದ್ದೆಗಳು ಖಾಲಿ ಇವೆ. ಅಲ್ಲದೆ, ಈ ಏಳು ಜಿಲ್ಲೆಗಳ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮಂಜುರಾಗಿರುವ 45,431 ಹುದ್ದೆಗಳಲ್ಲಿ 17,274 ಹುದ್ದೆಗಳು ಅಂದರೇ ಶೇ. 40 ರಷ್ಟು ಹುದ್ದೆಗಳು ಖಾಲಿ ಇವೆ. ಹೀಗಾದರೇ ಗುಣಮಟ್ಟದ ಶಿಕ್ಷಣ ಮತ್ತು ಉತ್ತಮ ಫಲಿತಾಂಶ ನಿರೀಕ್ಷಿಸುವುದು ಮರಳು ಗಾಡಿನಲ್ಲಿ ನೀರು ಬಯಸಿದಂತೆಯೇ ಸರಿ ಎಂದರು. ಶೈಕ್ಷಣಿಕ ಕಾರ್ಯ ಚಟುವಟಿಕೆಗಳು ಸರಳವಾಗಿ ಮತ್ತು ತ್ವರಿತ ಗತಿಯಲ್ಲಿ ನಡೆಯಲು ಹೊಸ ಕಂದಾಯ ತಾಲೂಕುಗಳಲ್ಲಿ ನೂತನ ಬಿಇಓ ಕಚೇರಿ ಪ್ರಾರಂಭಿಸಲು ಸಂಬಂಧಪಟ್ಟ ಉನ್ನತ ಅಧಿಕಾರಿಗಳು ಕ್ರಮವಹಸಿಬೇಕು ಎಂದು ಒತ್ತಾಯಿಸಿದರು.



ಕೆಕೆ ಅಭಿವೃದ್ಧಿಗೆ ಸರ್ಕಾರ ಐದು ಸಾವಿರ ಕೋಟಿ ಮೀಸಲಿಟ್ಟಿದೆ. ಅತಿಥಿ ಶಿಕ್ಷಕರಿಗೆ ಈಗ ಕೊಡುತ್ತಿರುವ ಸಂಬಳ ಸಾಲುತ್ತಿಲ್ಲ. ಬಿಎ, ಬಿ.ಇಡಿ ಪದವಿ ಮುಗಿಸಿದ ಅತಿಥಿ ಶಿಕ್ಷಕರನ್ನು ಕಲ್ಯಾಣ ಕರ್ನಾಟಕ ಮೀಸಲಾತಿಯಲ್ಲಿ ವಿಶೇಷ ಸ್ಥಾನಮಾನ ನೀಡಬೇಕು. ಕಕ ಭಾಗದ ಅತಿಥಿ ಶಿಕ್ಷಕರಿಗೆ ಪ್ರತ್ಯೇಕ ನೂರು ಕೋಟಿ ಮೀಸಲಿಟ್ಟು, ಅತಿಥಿ ಶಿಕ್ಷಕರ ಗೌರವದನವನ್ನು 20 ಸಾವಿರಕ್ಕೆ ಏರಿಕೆ ಮಾಡಿ ಪ್ರೋತ್ಸಾಹಿಸಬೇಕು. ಆರ್ಥಿಕ, ಶೈಕ್ಷಣಿಕ, ಸಾಮಾಜಿಕ ಅಭಿವೃದ್ಧಿಗೆ ಅತಿಥಿ ಶಿಕ್ಷಕರ ಪಾತ್ರವೂ ಮಹತ್ವದ್ದಾಗಿದೆ ಎಂದು ಸರ್ಕಾರ ಮನನ ಮಾಡಿಕೊಳ್ಳಬೇಕು ಎಂದರು.

# ಉಗ್ರರ ಸಹಚರರಿಬ್ಬರ ಬಂಧನ

**ಶೋಪಿಯಾನ್, ಮೇ.20–** ಜಮ್ಮು ಮತ್ತು ಕಾಶ್ಮೀರದ ಶೋಫಿಯಾನ್ ನಲ್ಲಿ ಡಿಕೆ ಪೋರಾ ಪ್ರದೇಶದಲ್ಲಿ ಭಾರತೀಯ ಸೇನೆಯ 34 ರಾಷ್ಟ್ರೀಯ ರೈಫಲ್ಸ್ ಸೇರಿದಂತೆ ವಿವಿಧ ಭದ್ರತಾ ಪಡೆಗಳು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಇಬ್ಬರು ಭಯೋತ್ಪಾದಕ ಸಹಚರರನ್ನು ಭದ್ರತಾ ಪಡೆಗಳು ಬಂಧಿಸುವಲ್ಲಿ ಯಶಸ್ವಿಯಾಗಿವೆ.

ಬಂಧಿತರಿಂದ ಭದ್ರತಾ ಪಡೆಗಳು ಎರಡು ಪಿಸ್ತೂಲ್‌ಗಳು, ನಾಲ್ಕು ಗ್ರೆನೇಡ್‌ಗಳು, 43 ಲೈವ್ ರೌಂಡ್‌ಗಳು ಮತ್ತು ಇತರ ದೋಷಾರೋಪಣೆ ವಸ್ತುಗಳನ್ನು ವಶಪಡಿಸಿಕೊಂಡಿವೆ ಎಂದು ಭದ್ರತಾ ಪಡೆಯ ಮೂಲಗಳು ತಿಳಿಸಿವೆ

ಶೋಪಿಯಾನ್ ಪೊಲೀಸರು ಬಂಧಿತರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದು ಅವರ ಸಂಪರ್ಕಗಳು ಮತ್ತು ಚಟುವಟಿಕೆಗಳನ್ನು ತನಿಖೆ ಮಾಡಲು ಹೆಚ್ಚಿನ ತನಿಖೆ ನಡೆಯುತ್ತಿದೆ.ಈ ಬಂಧನದಿಂದ ಕಣಿವೆ ಪ್ರದೇಶದಲ್ಲಿ ಕಾನೂನುಬಾಹಿರ ಮತ್ತು ವಿಧ್ವಂಸಕ ಚಟುವಟಿಕೆಗಳ ಕುರಿತು ನಡೆಯುತ್ತಿರುವ ತನಿಖೆಯಲ್ಲಿ ಮಹತ್ವದ ಮೈಲಿಗಲ್ಲು ಗುರುತಿಸುತ್ತದೆ. ರಾಷ್ಟ್ರೀಯ ಭದ್ರತೆಗೆ ಬೆದರಿಕೆಗಳನ್ನು ತಟಸ್ಥಗೊಳಿಸಲು ಮತ್ತು ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಲು ಶೋಪಿಯಾನ್ ಪೊಲೀಸರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

# ಮುಸ್ಲಿಂ ಸಮುದಾಯದ ಬೇಡಿಕೆ ಈಡೇರಿಸಲು ಕ್ರಮ : ಎನ್‌ಎಸ್‌ಬಿ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಮೇ.20–**ಪಟ್ಟಣದ ಈದ್ಗಾ ಶಾದಿಮಾಹಲ್ ಸಭಾಂಗಣದಲ್ಲಿ ತಾಲೂಕ ಈದ್ಗಾ ಕಮಿಟಿ ವತಿಯಿಂದ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅಭಿನಂದಾನ ಸಮಾರಂಭದಲ್ಲಿ ತಾ. ಈದ್ಗಾ ಕಮೀಟಿಯ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್ ಸಚಿವ ಎನ್.ಎಸ್.ಬೋಸರಾಜು ರವರನ್ನು ಸನ್ಮಾನಿಸಿ ಗೌರವಿಸಿ ಮಾತನಾಡಿ, ಸಚಿವ ಎನ್.ಎಸ್.ಬೋಸರಾಜು ರವರು ಮಾನ್ವಿ ತಾಲೂಕಿನಲ್ಲಿ ಹಿಂದೂ ಮತ್ತು ಮುಸ್ಲಿಂ ಸಮುದಾಯದವರು ಸೌಹಾರ್ದ ತೆಯಿಂದ ಬಳುವುದಕ್ಕೆ ಶ್ರಮಿಸಿದ್ದಾರೆ ಹಾಗೂ ಮುಸ್ಲಿಂ ಸಮುದಾಯದವರಿಗೆ ಅಗತ್ಯವಿ ರುವ ಈದ್ಗಾ ಶಾದಿಮಾಹಲ್ ನಿಮಾರ್ಣಕ್ಕೆ ಅಗತ್ಯವಾಗಿದ್ದ 1ಕೋಟಿ 70 ಲಕ್ಷ ಅನುದಾನ ಕೊಡಿಸಿದರಿಂದ ಉತ್ತಮ ಈದ್ಗಾ ಶಾದಿ ಮಹಲ್ ನಿರ್ಮಾಣ ಮಾಡುವುದಕ್ಕೆ ಸಾಧ್ಯವಾಗಿದೆ ಎಂದು ತಿಳಿಸಿದರು.

ಸನ್ಮಾನ ಸ್ವೀಕರಿಸಿ ಸಚಿವ ಎನ್.ಎಸ್.ಬೋಸರಾಜು ಮಾತನಾಡಿ ಸಮಾಜದಲ್ಲಿನ ಎಲ್ಲಾ ಸಮುದಾಯಗಳು ಒಂದಾಗಿದ್ದಾಗ ಮಾತ್ರ ಅಭಿವೃದ್ಧಿ ಹೊಂದುವುದಕ್ಕೆ ಸಾಧ್ಯವಾಗುತ್ತದೆ ರಾಯಚೂರು ಪಟ್ಟಣದಲ್ಲಿ 70 ಸಾವಿರ ಅಲ್ಪ ಸಂಖ್ಯಾತ ಸಮುದಾಯದವರು ವಾಸವಾಗಿದ್ದಾರೆ ಅವರ ಸ್ಥಿತಿ ಇಂದು ಗಂಭಿರವಾಗಿದೆ ಇದುವರೆಗೂ ಕೂಡ ಅಲ್ಪಸಂಖ್ಯಾತ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಇರುವ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಲ್ಲ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳಲ್ಲಿ ಮಾನ್ವಿ ಮತ್ತು ರಾಯಚೂರು ಪಟ್ಟಣದಲ್ಲಿನ ಅಲ್ಪಸಂಖ್ಯಾತ ಕಾಲೋನಿಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸುವುದಕ್ಕೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ರಾಯಚೂರು ನಗರದಲ್ಲಿ ಮುಸ್ಲಿಂ ಸಮುದಾಯದವರಿಗೆ ಒಂದೆ ಈದ್ಗಾ ಮೈದಾನದಲ್ಲಿ ಪ್ರಾರ್ಥನೆ ಸಲ್ಲಿಸುವುದಕ್ಕೆ ತೊಂದರೆಯಾಗುತ್ತಿರುವುದನ್ನು ಕಂಡು ಮತ್ತೊಂದು ನೂತನ ಈದ್ಗಾ ಮೈದಾನ ನಿರ್ಮಾಣ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ನಮ್ಮ ಸರ್ಕಾರದಿಂದ ಮುಸ್ಲಿಂ ಸಮುದಾಯದವರಿಗೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಈದ್ಗಾ ಶಾದಿಮಹಲ್‌ಗಳ ಅಭಿವೃದ್ಧಿ, ಸೇರಿದಂತೆ ವಕ್ಫ ಸಂಸ್ಥೆಯಿಂದ ಶಿಫಾರಸ್ಸು ಮಾಡುವ ಅಭಿವೃದ್ಧಿ ಕಾರ್ಯಗಳಿಗೆ ನೆರವು ನೀಡಲಾಗುವುದು ಮಾನ್ವಿ, ಸಿರವಾರ,ಕವಿತಾಳ,ಕಲ್ಲೂರು ಸೇರಿದಂತೆ ಮುಸ್ಲಿಂ ಸಮುದಾಯದವರ ಎಲ್ಲಾ ಬೇಡಿಕೆಗಳನ್ನು ಇನ್ನೂ ಮೂರು ವರ್ಷಗಳಲ್ಲಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ವಕ್ಫ ಸಮಿತಿ ಅಧ್ಯಕ್ಷರಾದ ಮೌಲಾನ ಫರೀದ್ ಖಾನ್ ಮಾತನಾಡಿ, ಮಾನ್ವಿ ತಾಲೂಕಿನಲ್ಲಿ ವಕ್ಫ ಸಮಿತಿಯ ಆಸ್ತಿಗಳನ್ನು ಸಂರಕ್ಷಿಸುವುದಕ್ಕಾಗಿ ಕಂದಾಯ ಇಲಾಖೆಯ ತಹಸೀಲ್ದಾರ್ ಅಧ್ಯಕ್ಷತೆಯಲ್ಲಿ ವಕ್ಫ್ ಅದಾಲತ್ ನಡೆಸಲಾಗುವುದು. ರಾಜ್ಯ ಸರಕಾರ ಬಜೆಟ್‌ನಲ್ಲಿ ಅಲ್ಪಸಂಖ್ಯಾತರ ಅಭಿವೃದ್ದಿಗಾಗಿ ಹೆಚ್ಚಿನ ಅನುದಾನ ನೀಡಿದೆ ವಕ್ಫ್ ಸಮಿತಿಯ ಖಾಬರ್‌ಸ್ತಾನ್, ದರ್ಗಾ, ಮಸೀದಿಗಳ ಅಭಿವೃದ್ಧಿಗೆ ವಕ್ಫ ರಾಜ್ಯ ಸಚಿವರಾದ ಜಮೀರ್ ಅಹಮದ್ ಖಾನ್ ರವರೊಂದಿಗೆ ಭೇಟಿ ಮಾಡಿ ಅಗತ್ಯ ಅನುದಾನ ಮಂಜೂರು ಮಾಡಿಸಲಾಗುವುದು ಮಾನ್ವಿ ಈದ್ಗಾ ಸಮಿತಿಯ ಶಾಧಿಮಹಲ್ ಆವರಣದಲ್ಲಿ ಶಾಪಿಂಗ್ ಕಾಂಪ್ಲೇಕ್ಸ್, ವಸತಿ ನಿಲಯಗಳ ನಿರ್ಮಾಣ ,ಲಿಫ್ಟ್ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದರು.

ತಾಲೂಕ ಈದ್ಗಾ ಕಮೀಟಿ ವತಿಯಿಂದ ಶಾಸಕ ಹಂಪಯ್ಯ ನಾಯಕ, ಜಿಲ್ಲಾ ವಕ್ಫ ಸಮಿತಿ ಅಧ್ಯಕ್ಷರಾದ ಮೌಲಾನ ಫರೀದ್ ಖಾನ್ ರವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮೌಲಾನ ಅನ್ವರ್ ಪಾಶ ಉಮರಿ,ಮೌಲಾನ ಮುಫ್ತಿ ಸೈಯಾದ್ ಹಸನ್ ಜಿಶಾನ್ ಖಾಸ್ಮಿ, ಅಬ್ದುಲ್ ಕರೀಂ ಖಾನ್ ಸಾಬ್, ಮಾರುಫ್ ಖಾನ್ ಸಾಬ್,ಅಕ್ಬರ್ ಪಾಷಾ,ಮಹಮ್ಮದ್ ಇಸ್ಮಾಯಿಲ್ ಸಾಬ್,ಇಸ್ಮಾಯಿಲ್, ಶೇಖ್ ಜಮೀಲ್ ಅಹಮ್ಮದ್,ಮೌಲಾಲಿ ನೈಕ್, ಬಿ.ಕೆ.ಅಮರೇಶಪ್ಪ, ವೀರೇಶ.ಡಿ, ಪುರಸಭೆ ಸದಸ್ಯರಾ ಸಾಬೀರ್ ಹುಸೇನ್ ಸಾಬ್, ಬಾಷ, ನಜೀರ್ ಖಾದ್ರಿ, ಮಹಾಂತೇಶಸ್ವಾಮಿ ರೌಡೂರು, ಜಿ.ನಾಗರಾಜ,ಮಹಾಂತೇಶ ಚೀಕಲಪರ್ವಿ ಸೇರಿದಂತೆ ಮುಸ್ಲಿಂ ಸಮುದಾಯದವರಿದ್ದರು.

# ಲಿಂಗಸಗೂರು: ಬಿಜೆಪಿ ನೇತೃತ್ವದಲ್ಲಿ ತಿರಂಗಾ ಯಾತ್ರೆ

**ಯುವ ಮಾರ್ಗ ಸುದ್ದಿ**

**ಲಿಂಗಸಗೂರು,ಮೇ.20–** ಆಪರೇಷನ್ ಸಿಂಧೂರ ಯಶಸ್ಸು, ಯೋಧ ನಮನ ಹಾಗೂ ರಾಷ್ಟ ರಕ್ಷಣೆಗಾಗಿ ಪಟ್ಟಣದಲ್ಲಿ ಬಿಜೆಪಿ ನೇತೃತ್ವದಲ್ಲಿ ತಿರಂಗಾ ಯಾತ್ರೆ ದೊಡ್ಡ ಹನುಮಂತ ದೇವಸ್ಥಾನದಿಂದ ಲಕ್ಷ್ಮೀ ದೇವಸ್ಥಾನದವರೆಗೆ ತಿರಂಗಾ ಯಾತ್ರೆ ನಡೆಯಿತು.ಶಾಸಕ ಮಾನಪ್ಪ ವಜ್ಜಲ್ ಅಂಬೇಡ್ಕರ್ ವೃತ್ತದಲ್ಲಿ ತಿರಂಗಾ ಯಾತ್ರೆಯನ್ನು ಉದ್ದೇಶಿಸಿ ಮಾತನಾಡಿ, ಕಾಶ್ಮೀರದ ಪಹಲ್ಗಾವ್ ಬಳಿಯ ಬೈಸರನ್ ಕಣಿವೆಯಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕರ ದಾಳಿಯಲ್ಲಿ ಅಮಾಯಕರ ಹತ್ಯೆಯಾಗಿದೆ. ಇದಕ್ಕೆ ಪ್ರತೀಕಾರವಾಗಿ ಭಾರತದ ಸೇನೆ ಆಪರೇಷನ್ ಸಿಂಧೂರ ಕಾರ್ಯಾಚರಣೆ ನಡೆಸಿ ಉಗ್ರಗಾ



ಮಿಗಳ ಹೆಡೆಮುರಿ ಕಟ್ಟಿ ಭ್ರಷ್ಟ ಪಾಕಿಸ್ತಾನದ ಬಲ ಕುಸಿಯುವಂತೆ ಮಾಡಿದೆ.ಭಾರತೀಯ ಸೇನೆಯ ಸದೃಢ ನಾಯಕತ್ವ ಮತ್ತು ಸೈನಿಕರ ದಿಟ್ಟ ಉತ್ತರದ ಪರಿಣಾಮದಿಂದ ಪಾಕಿಸ್ತಾನ ಕಂಗೆಟ್ಟಿದೆ. ಭಯೋತ್ಪಾದಕರಿಗೆ ಭಯ ಉಂಟಾಗಿದ್ದು, ಜಾಗತಿಕ ಮಟ್ಟದಲ್ಲಿಯೂ ಭಾರತದ ಸ್ಥಾನಮಾನ ಹೆಚ್ಚಿದೆ. ಭಾರತವು ವಿಶ್ವಕ್ಕೆ ಉಗ್ರತ್ವದ ನಿರ್ಮೂಲನೆಯ ಸ್ಪಷ್ಟ ಸಂದೇಶ ನೀಡಿದೆ. ಪ್ರತಿಕೂಲ ಸಮಯದಲ್ಲಿ ಧೃಡ ನಿರ್ಧಾರ ಕೈಗೊಂಡು ದೇಶವೇ ಮೊದಲು ಎನ್ನುವ ಸಂದೇಶ ಸಾರಿದೆ ಎಂದರು.ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂತೋಷ ರಾಜಗುರು, ತಾಲೂಕು ಅಧ್ಯಕ್ಷ ಅಯ್ಯಾಪ್ಪ ಮಾಳೂರು, ಕಾರ್ಯದರ್ಶಿ ಚನ್ನಬಸವ ಹಿರೇಮಠ, ಪರಮೇಶ ಯಾದವ್, ಅನಂತದಾಸ್, ಹುಸೇನಪ್ಪ ಯರಡೋಣಿ ಸೇರಿ ವಿವಿಧ ಶಾಲಾ ಕಾಲೇಜು ಮಕ್ಕಳು ಈ ಯಾತ್ರೆಯಲ್ಲಿ ಪಾಲ್ಗೊಂಡಿದ್ದರು

# ಇಲಾಖೆಗಳಲ್ಲಿ ಭ್ರಷ್ಟಚಾರ ತುಂಬಿ ತುಳುಕುತ್ತಿದೆ: ಸೋಮಶೇಖರರೆಡ್ಡಿ

**ಬಳ್ಳಾರಿ, ಮೇ.20–** ಭಷ್ಟಾಚಾರ ಮುಕ್ತ ಬಳ್ಳಾರಿ ಮಾಡುವುದಾಗಿ ಸ್ಥಳೀಯ ಶಾಸಕರು ಹೇಳಿದಾಗ ಸಂತೋಷವಾಗಿತ್ತು. ಆದರೆ ಅವರ ಆಡಳಿತದಲ್ಲಿ, ಮರಳು, ಸಬ್ ರಿಜಿಸ್ಟರ್ ಕಚೇರಿ, ಆರ್ ಟಿ ಓ ಕಚೇರಿ ಎಲ್ಲದರಲ್ಲೂ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆಂದು ಮಾಜಿ ಶಾಸಕ ಗಾಲಿ ಸೋಮಶೇಖರ್ ರೆಡ್ಡಿ ಆರೋಪಿಸಿದ್ದಾರೆ.

ಅವರಿಂದು ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಟಿ ಮಾತನಾಡುತ್ತ. ಕನಿಷ್ಟ ಪಕ್ಷ ನಗರದ ರಸ್ತೆಗಳ ಗುಂಡಿಗಳನ್ನು ಮುಚ್ಚುತ್ತಿಲ್ಲ.



ಉಸ್ತುವಾರಿ ಸಚಿವರನ್ನು ಹುಡುಕಬೇಕಿದೆ. ಕಳೆದ ಎಂಟು ತಿಂಗಳಿಂದ ಇತ್ತ ತಿರುಗಿ ನೀಡುತ್ತಿಲ್ಲ. ಸ್ಥಳೀಯ ಶಾಸಕರು ಇದ್ದ ಸರ್ಕಲ್ ಗಳನ್ನು ತೆಗೆಯುವುದು ಹೊಸದಾಗಿ ಮಾಡುವುದು ಇದು ತೊಗಲಕ್ ರೀತಿಯ ಸರ್ಕಾರ ಆಗಿದೆ ಎಂದು ಭರತ್ ರೆಡ್ಡಿ ಹೆಸರೇಳದೆ ಟೀಕಿಸಿದರು.ಬುಡಾದಲ್ಲಿ ನಡೆದ ಹಗರಣದಿಂದ ರಿಯಲ್ ಎಸ್ಟೇಟ್ ನವರು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಬಂದಿದೆ.ಶೂನ್ಯ ಅಭಿವೃದ್ಧಿಯ ಈ ಸರ್ಕಾರದಿಂದ ಮುಂದೆಯೂ ಅಭಿವೃದ್ಧಿ ನಿರೀಕ್ಷೆ ಇಲ್ಲ. ಅವರವರ ಮನಸ್ತಾಪದಿಂದ ಸರ್ಕಾರ ಬಿದ್ದರೆ ಒಳಿತು ಎಂದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**